ಸಂಪುಟ : 10 ಸಂಚಿಕೆ: 296 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 09 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 296 Pages : 4+2 Price : 3.00 Friday January 09 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ , ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ.ಪಾಟೀಲ ಅವರು ಜನವರಿ 9 ರಂದು ಅಣ್ಣಿಗೇರಿಯಿಂದ ಬೆಳಿಗ್ಗೆ 11.30 ಗಂಟೆಗೆ ರಸ್ತೆ ಮೂಲಕ ಹೊರಟು ಮಧ್ಯಾಹ್ನ 12 ಗಂಟೆಗೆ ಗದುಗಿಗೆ ಆಗಮಿಸುವರು. ಸಂಜೆ 6.30 ಗಂಟೆಗೆ ಗದಗಿನಿಂದ ರಸ್ತೆ ಮೂಲಕ ಹುಬ್ಬಳ್ಳಿಗೆ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಅರ್ಜಿ ಅಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಜಾನಪದ ಅಕಾಡೆಮಿ ವತಿಯಿಂದ ಫೆಲೋಶಿಪ್(ಅಧ್ಯಯನ ವೇತನ) ಲೇಖನಗಳಿಗೆ ಅರ್ಜಿಗಳನ್ನು ಕರೆಯಲಾಗಿದೆ. ಕರ್ನಾಟಕ ಜಾನಪದ ಅಕಾಡೆಮಿ ವೆಬ್‌ಸೈಟ್ https://janapada.karnataka.gov.in ನಲ್ಲಿ ತಿಳಿಸಿರುವ ಶೀರ್ಷಿಕೆಗಳನ್ನು ಆಧರಿಸಿ ಕ್ಷೇತ್ರ ಕಾರ್ಯ ನಡೆಸಿ ಅಧ್ಯಯನ ಕೃತಿಗಳನ್ನು ಸಿದ್ದಪಡಿಸಿ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಒಂದು ಶೀರ್ಷಿಕೆಯನ್ನು ಆಯ್ಕೆ ಮಾಡಿ 5 ಪುಟಗಳ ಸಾರಲೇಖವನ್ನು ಬರೆದು ರಿಜಿಸ್ಟರ್,ಕರ್ನಾಟಕ ಜಾನಪದ ಅಕಾಡೆಮಿ,ಎರಡನೇ ಮಹಡಿ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರ–560002 ಈ ವಿಳಾಸಕ್ಕೆ ಕಳುಹಿಸಿಕೊಡಲು ಕೋರಿದೆ. ಸಾರಲೇಖ ಆಯ್ಕೆಯಾದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಫೆಲೋಶಿಪ್ ಕಾರ್ಯನಡೆಸಲು ಆದೇಶ ನೀಡಲಾಗುವುದು.

ಫೆಲೋಶಿಪ್ ಗಾಗಿ ಸಾಮಾನ್ಯ–1, ಪರಿಶಿಷ್ಟ ಜಾತಿ–5 ಮತ್ತು ಪರಿಶಿಷ್ಟ ಪಂಗಡ–9 ಮಂದಿಗಳು ಸೇರಿದಂತೆ 15 ಮಂದಿಗಾಗಿ ಅಭ್ಯರ್ಥಿಗಳಿಂದ ಫೆಲೋಶಿಪ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಜನವರಿ 23 ಆಗಿದ್ದು, ಅರ್ಜಿ ನಮೂನೆ , ಫೆಲೋಶಿಪ್ ಶೀರ್ಷಿಕೆಗಳು ಮತ್ತು ಇತರೆ ವಿವರಗಳಿಗಾಗಿ ಅಕಾಡೆಮಿಯ ವೆಬ್ ಸೈಟ್ ( https://janapada.karnataka.gov.in ) ನಿಂದ ಪಡೆಯಬಹುದಾಗಿದೆ.

## ಅರ್ಜಿ ಅಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023–2024, 2024–2025 ಮತ್ತು 2025–2026ನೇ ಸಾಲಿನ ಎಸ್.ಎಫ್.ಸಿ. ಹಾಗೂ ಪಟ್ಟಣ ಪಂಚಾಯತ ನಿಧಿಯಲ್ಲಿ ವಿಕಲಚೇತನರ ಕಲ್ಯಾಣ ಯೋಜನೆಯ ಕಾರ್ಯಕ್ರಮ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ವಿಕಲಚೇತನರಿಗೆ ಸ್ವಯಂ ಉದ್ಯೋಗಕ್ಕೆ ಬ್ಯಾಂಕ್ ನಿಂದ ಸಾಲ ಪಡೆದ ಫಲಾನುಭವಿಗಳಿಂದ ಅರ್ಜಿ ಸ್ವೀಕೃತಿ ಮಾಡಿ ಬ್ಯಾಂಕಿಗೆ ಕಳುಹಿಸುವುದು.

ಬ್ಯಾಂಕ್ ಸಾಲ ಪಡೆದ ಫಲಾನುಭವಿಗಳಿಗೆ ಯೋಜನಾ ವೆಚ್ಚದ ಶೇಕಡಾ 50 ರಷ್ಟು ಸಹಾಯಧನಕ್ಕಾಗಿ ಮತ್ತು ವಿಕಲಚೇತನರ ಸ್ಕೂಟಿ ಪೂರೈಸುವ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜನವರಿ 27 ಆಗಿದೆ. ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯತ್ ಕಾರ್ಯಾಲಯ ಶಿರಹಟ್ಟಿ ಇವರನ್ನು ಸಂಪರ್ಕಸಬಹುದಾಗಿದೆ.

### ವಿಬಿಜಿ, ರಾಮ್ ಜಿ ಯೋಜನೆಯ ಬಗ್ಗೆ ಕಾನೂನಾತ್ಮಕ ಕ್ರಮ ಕೈಗೊಳ್ಳಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ; ಸಚಿವ ಎಚ್.ಕೆ. ಪಾಟೀಲ

# ಕೇಂದ್ರ ಸರ್ಕಾರ ಕೂಲಿಕಾರರ ಹಿತ ಕಾಪಾಡಿಲ್ಲ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಕೇಂದ್ರ ಸರ್ಕಾರ ಹಿಂಪಡೆದಿರುವ ಬಗ್ಗೆ ಸಚಿವ ಸಂಪುಟ ಸಭೆ ಚರ್ಚೆ ನಡೆಸಿದ್ದು, ಇದರ ಬದಲಿಗೆ ತಂದಿರುವ ,ವಿಬಿಜಿ, ರಾಮ್ ಜಿ ಯೋಜನೆಯ ಬಗ್ಗೆ ಕಾನೂನಾತ್ಮಕ ಕ್ರಮ ಕೈಗೊಳ್ಳಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ ಎಂದು ಕಾನೂನು, ಪ್ರವಾಸೋದ್ಯಮ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ ತಿಳಿಸಿದರು.

ಅವರು ಗುರುವಾರ ಸಚಿವ ಸಂಪುಟ ಸಭೆಯ ನಂತರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯದ ಕುರಿತು ತಿಳಿಸಿದರು.

ಜನರ ನ್ಯಾಯಾಲಯಕ್ಕೂ ವಿಬಿಜಿ, ರಾಮ್ ಜಿ ಯೋಜನೆ ತೆಗೆದುಕೊಂಡು ಹೋಗಲು ನಿರ್ಣಯಿಸಲಾಗಿದೆ. ಸಂವಿಧಾನದ 73ನೇ ತಿದ್ದುಪಡಿಯಾದ ನಂತರ ದೇಶದಲ್ಲಿ ವಿಕೇಂದ್ರೀಕರಣವಾಗಿದೆ. ಈ ಯೋಜನೆಯಿಂದ ವಿಕೇಂದ್ರೀಕರಣಕ್ಕೆ ಕೊಡಲಿ ಏಟು ಬಿದ್ದಿದೆ. ಗ್ರಾಮೀಣ ಭಾಗದ ಜನರ ಉದ್ಯೋಗದ ಹಕ್ಕನ್ನು ಕಿತ್ತುಕೊಳ್ಳುವ ಕೆಲಸವನ್ನು ಒಓಖಇಉಂ ವಾಪಸ್ಸು ಪಡೆಯುವ ಮೂಲಕ ಮಾಡಲಾಗಿದೆ ಎಂದರು. MNREGA ಮೂಲಕ ಪಂಚಾಯಿತಿಗಳಲ್ಲಿ ಆಸ್ತಿ ನಿರ್ಮಾಣವಾಗುತ್ತಿತ್ತು. ಈಗ ಕರಾಳ ಕಾನೂನು ತಂದು ಕಾರ್ಮಿಕರು, ಗುತ್ತಿಗೆದಾರರು ಮಾಡಿಸುತ್ತಿರುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳಲ್ಲಿ ಕೆಲಸ ಮಾಡಬೇಕಿದೆ. ಕೂಲಿಕಾರರ ಹಿತ ಕಾಪಾಡುವ ಆಸಕ್ತಿಯನ್ನು ಕೇಂದ್ರ ಸರ್ಕಾರ ತೋರಿಸಿಲ್ಲ. ಬದಲಿಗೆ ಉದ್ಯೋಗದ ಹಕ್ಕನ್ನು ಕಿತ್ತುಕೊಂಡಿದೆ. ಗ್ರಾಮಗಳಲ್ಲಿ ಯಾವ ಕೆಲಸವಾಗಬೇಕೆಂದು ತೀರ್ಮಾನಿಸುವ ಅಧಿಕಾರ ಪಂಚಾಯಿತಿಗಳಿಗಿತ್ತು. ಈಗ ಅದನ್ನು ಸಂಪೂರ್ಣವಾಗಿ ಕಿತ್ತುಕೊಂಡು ಕೆಲಸ ಎಲ್ಲಿ ಆಗಬೇಕು ಎಂದು ಕೇಂದ್ರ ಸರ್ಕಾರ ನಿರ್ದೇಶನ ನೀಡುತ್ತದೆ. ಈ ಕರಾಳ ಶಾಸನವನ್ನು ಕರ್ನಾಟಕ ಸರ್ಕಾರ ತೀವ್ರವಾಗಿ ವಿರೋಧಿಸುತ್ತದೆ. ರಾಜಕೀಯವಾಗಿ, ಕಾನೂನಾತ್ಮಕವಾಗಿ ಹಾಗೂ ಜನರ ನ್ಯಾಯಾಲಯದಲ್ಲಿ ಹೋರಾಟ ಮಾಡುವುದಾಗಿ ತಿಳಿಸಿದರು.

ಮೇಲ್ನೋಟಕ್ಕೆ 125 ದಿನ ಕೆಲಸ ನೀಡುವುದು ಎಂದಿದ್ದರೂ, ನಿರ್ದಿಷ್ಟವಾಗಿ ಆಗುವಂತಿಲ್ಲ. ಇದಕ್ಕೆ ಹಣವೆಲ್ಲಿದೆ? ಶೇ. 40ರಷ್ಟು ಅನುದಾನವನ್ನು ರಾಜ್ಯ ಸರ್ಕಾರ ಭರಿಸಬೇಕಿದೆ. ಭಾರೀ ಪ್ರಮಾಣದ ಆರ್ಥಿಕ ಹೊರೆ ಬೀಳುವಂತಿದ್ದರೆ ಸಂಬಂಧಪಟ್ಟ ರಾಜ್ಯಗಳೊಂದಿಗೆ ಚರ್ಚೆ ಮಾಡಬೇಕು. ಆದರೆ ಹಾಗೆ ಆಗಿಲ್ಲ. 15ನೇ ಹಣಕಾಸು ಆಯೋಗದ ಶಿಫಾರಸುಗಳು ಅನುಷ್ಠಾನಕ್ಕೆ ಬಂದ ನಂತರ ಇದನ್ನು ಹೊಸದಾಗಿ ಸೇರ್ಪಡೆ ಮಾಡಲಾಗಿದೆ ಎಂದರು.

ಪಂಚಾಯತಿ ಚುನಾವಣೆಯನ್ನು ಆದಷ್ಟು ಶೀಘ್ರವಾಗಿ ನಡೆಸಲು ತೀರ್ಮಾನಿಸಿದೆ. ಹಲವಾರು ಪಂಚಾಯಿತಿಗಳು ಸುಪ್ರೀಂ ಕೋರ್ಟಿಗೆ ಹೋಗುವಂತೆ ರಾಜ್ಯ ಸರ್ಕಾರವನ್ನು ಕೋರಿವೆ. ಒಂದೆರಡು ದಿನಗಳಲ್ಲಿ ಈ ಬಗ್ಗೆ ತೀರ್ಮಾನ ಮಾಡಲಿದೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ರಾಜ್ಯದ ವಿವಿಧ ಕೇಂದ್ರ ಕಾರಾಗೃಹಗಳಲ್ಲಿರುವ 33 ಜೀವಾವಧಿ ಶಿಕ್ಷಾ ಬಂಧಿಗಳನ್ನು ಸನ್ನಡತೆ ಆಧಾರದ ಮೇಲೆ ಅವಧಿಪೂರ್ವ ಬಿಡುಗಡೆ ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಪೈಕಿ ಇಬ್ಬರು ಶಿಕ್ಷಾ ಬಂಧಿಗಳನ್ನು ಕೇಂದ್ರ ಗೃಹ ಮಂತ್ರಾಲಯದ ಸಹಮತಿ ದೊರಕಿದ ನಂತರ ಬಿಡುಗಡೆ ಮಾಡಲು ನಿರ್ಣಯ ಕೈಗೊಳ್ಳಲಾಗಿದೆ.

### ಮಾಡಲಗೇರಿ ಗ್ರಾಮಸ್ಥರಿಂದ ಅಬಕಾರಿ ಕಚೇರಿಗೆ ಮುತ್ತಿಗೆ । ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಮಹಿಳೆಯರು

# ಅಕ್ರಮ ಮದ್ಯ ಮಾರಾಟದಲ್ಲಿ ಅಧಿಕಾರಿಗಳೇ ಶಾಮೀಲು?!



■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಮಾಡಲಗೇರಿ ಗ್ರಾಮದಲ್ಲಿ ಆಕ್ರಮ ಸಾರಾಯಿ ಮಾರಾಟ ಎಗ್ಗಿಲ್ಲದೆ ಸಾಗಿದ್ದು, ಅಕ್ರಮ ಸಾರಾಯಿ ಸೇವನೆಯಿಂದ ಗ್ರಾಮದ 7ರಿಂದ 9 ವ್ಯಸನಿಗಳು ಸಾವನ್ನಪ್ಪಿದ್ದಾರೆ. ಈ ಕುರಿತು ಹಲವಾರು ಬಾರಿ ಇಲಾಖೆಗೆ ಮನವಿ ಸಲ್ಲಿಸಿದರೂ ಸಹ ಇಲಾಖೆಯ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿ ಮಾಡಲಗೇರಿ ಗ್ರಾಮಸ್ಥರು ಗುರುವಾರ ಅಬಕಾರಿ ಕಚೇರಿಗೆ ಮುತ್ತಿಗೆ ಹಾಕಿ ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ಸುಮಾರು 9 ಜನ ಅಕ್ರಮ ಸಾರಾಯಿ ಮಾರಾಟದಲ್ಲಿ ತೊಡಗಿಕೊಂಡಿದ್ದಾರೆ. ಗ್ರಾಮದ ಯುವಕರು ದುಡಿದು ಬಂದ ಹಣವನ್ನು ಸಾರಾಯಿ ಕುಡಿತಕ್ಕೆ ಸುರಿಯುತ್ತಿದ್ದಾರೆ. ಇದರಿಂದ ಅನೇಕ ಸಂಸಾರಗಳು ಬೀದಿಗೆ ಬಂದಿದ್ದು, ಗ್ರಾಮದಲ್ಲಿಯೇ ಸಿಗುತ್ತಿರುವ ಮದ್ಯವನ್ನು ಸೇವಿಸಿ ಇಲ್ಲಿಯವರೆಗೆ 7ರಿಂದ 9 ಜನರು ಮೃತಪಟ್ಟಿದ್ದಾರೆ. ಇದಕ್ಕೆ ಅಬಕಾರಿ ಇಲಾಖೆಯ ಅಧಿಕಾರಿಗಳೇ ಹೊಣೆ ಎಂದು ಆರೋಪಿಸಿದರು.

ಸಾರಾಯಿ ಸೇವನೆಯಿಂದ ಮಕ್ಕಳನ್ನು ಕಳೆದುಕೊಂಡಿರುವ ತಾಯಂದಿರು ಅಬಕಾರಿ ನಿರೀಕ್ಷಕರಾದ ಶ್ರೀದೇವಿ ಕೊಳ್ಳಿಯವರನ್ನು ತರಾ–ಟೆಗೆ ತೆಗದುಕೊಂಡು ಕಣ್ಣೀರು ಹಾಕಿದರು. ಇಲಾಖೆಯ ಸಿಬ್ಬಂದಿಗಳೇ ಅಕ್ರಮ ಸಾರಾಯಿ ಮಾರಾಟದಲ್ಲಿ ನೇರವಾಗಿ ತೊಡಗಿಕೊಂಡಿದ್ದಾರೆ. ಅಲ್ಲದೆ ಮಾರಾಟಗಾರರಿಂದ ಹಫ್ತಾ ವಸೂಲಿ ಮಾಡುತ್ತಿದ್ದಾರೆ. ಇದರಿಂದ ಗ್ರಾಮದಲ್ಲಿ ಸಾರಾಯಿ ಮಾರಾಟ ಅಧಿಕವಾಗುತ್ತಿದ್ದು, ಇದಕ್ಕೆಲ್ಲ ನೀವೇ ಕಾರಣ ಎಂದು ಹರಿಹಾಯ್ದರು. ಗ್ರಾಮದಲ್ಲಿ ಅಕ್ರಮ ಸಾರಾಯಿ ಮಾರಾಟ ನಿಲ್ಲದಿದ್ದರೆ ಉಪವಾಸ ಸತ್ಯಾಗ್ರಹ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಗ್ರಾಮಸ್ಥರ ಸಿಟ್ಟು ಅರಿತ ಪಿಎಸ್ಐ ಪ್ರಕಾಶ ಬಣಕಾರ ಮಧ್ಯ ಪ್ರವೇಶಿಸಿ, ಗ್ರಾಮದಲ್ಲಿ ಈ ರೀತಿ ನಡೆಯುತ್ತಿದೆ ಎಂದು ನಮ್ಮ ಗಮನಕ್ಕೆ ತಂದಿದೀರಿ, ಇನ್ನು ನಿಮಗೆ ಚಿಂತೆ ಬೇಡ. ಗ್ರಾಮದಲ್ಲಿ ನಡೆಯುವ ಅಕ್ರಮ ದಂಧೆಗಳಿಗೆ ಕಡಿವಾಣ ಹಾಕಲಾಗುವುದು ಎನ್ನುತ್ತಿದ್ದಂತೆ ಪುನಃ ಆಕ್ರೋಶಗೊಂಡ ಮಹಿಳೆಯರು, ▶▶3ನೇ ಪುಟಕ್ಕೆ

ಅಕ್ರಮ ಸಾರಾಯಿ ಮಾರಾಟದಿಂದ ಗ್ರಾಮದಲ್ಲಿ ನೆಮ್ಮದಿಯಿಲ್ಲ. ಸಂಜೆಯಾದರೆ ಮಹಿಳೆಯರು ಹೊರಗಡೆ ಬರುವಂತಿಲ್ಲ, ಮನೆಯ ಜವಾಬ್ದಾರಿಗಳನ್ನು ಹೊರಬೇಕಾದ ಮಕ್ಕಳು ಸಾರಾಯಿ ಚಟಕ್ಕೆ ಬಲಿಯಾಗಿ ಜೀವ ಕಳೆದುಕೊಳ್ಳುತ್ತಿದ್ದಾರೆ. ಸ್ವತಃ ನಾನೇ ಮಗನನ್ನು ಕಳೆದುಕೊಂಡಿದ್ದೇನೆ. ಬೇರೆಯವರ ಮಕ್ಕಳೂ ಬಲಿಯಾಗಬಾರದೆಂದು ನನ್ನ ಹೋರಾಟ ಸಾಗಿದೆ. ಇನ್ನಾದರೂ ಅಧಿಕಾರಿಗಳು ಅಕ್ರಮ ಸಾರಾಯಿ ಮಾರಾಟವನ್ನು ನಿಲ್ಲಿಸಲಿ.


**– ಹನಮವ್ವ ಭೀಮನಗೌಡ್ರ.**
ಮಾಡಲಗೇರಿ.

ಗ್ರಾಮದಲ್ಲಿ ಅಕ್ರಮ ಸಾರಾಯಿ ಮಾರಾಟದಿಂದ ಈಗಾಗಲೇ 7ರಿಂದ 9 ಜನ ಸಾವನ್ನಪ್ಪಿದ್ದಾರೆ. ಈ ಕುರಿತು ಹಲವಾರು ಬಾರಿ ಇಲಾಖೆಯವರಿಗೆ ತಿಳಿಸಿದರು ಸಹ ಪ್ರಯೋಜನವಾಗುತ್ತಿಲ್ಲ. ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಈ ಅಕ್ರಮದಲ್ಲಿ ನೇರವಾಗಿ ಭಾಗಿಯಾಗಿದ್ದಾರೆ.

**– ಶಂಕರಗೌಡ ಭೀಮನಗೌಡ್ರ.**
ಮಾಡಲಗೇರಿ.

### ಧೂಮಪಾನ ಅಡ್ಡೆಗಳ ಮೇಲೆ ಕೋಟ್ಪಾ ದಾಳಿ

# ನಿಯಮ ಉಲ್ಲಂಘಿಸಿದರೆ ಕಠಿಣ ಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರೀತ್ ಖೋನಾ ನೇತೃತ್ವದಲ್ಲಿ ತಾಲೂಕಾ ತನಿಖಾ ದಳ ಹಾಗೂ ಜಿಲ್ಲಾ ತಂಬಾಕು ಕೋಶ ಗದಗ ವತಿಯಿಂದ ನಗರದ ಮುಳಗುಂದ ರಸ್ತೆಯಲ್ಲಿ ಕೋಟ್ಪಾ ದಾಳಿ ಹಮ್ಮಿಕೊಂಡು ತಂಬಾಕು ನಿಯಂತ್ರಣ ಕೋಟ್ಪಾ ಕಾಯ್ದೆ–2003 ಉಲ್ಲಂಘನೆ ಕುರಿತು ಮಾರಾಟಗಾರರಿಗೆ ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ಪ್ರಕರಣ ದಾಖಲಿಸಿ, 4 ಸಾವಿರ ರೂ ದಂಡ ವಿಧಿಸಿ ಶಾಲೆಗಳ 100 ಅಡಿ ಒಳಗಡೆ ತಂಬಾಕು ಮಾರಾಟ ಮಾಡುವ ಅಂಗಡಿಗಳನ್ನು ಮುಚ್ಚಿಸಿ ಕ್ರಮ ಕೈಗೊಳ್ಳಲಾಯಿತು.

ಕೋಟ್ಪಾ ಕಾಯ್ದೆ ಸೆಕ್ಷನ್ 6ಬಿ ಪ್ರಕಾರ ಶಾಲಾ ಕಾಲೇಜುಗಳ ಸುತ್ತ 100 ಗಜದವರೆಗೆ ತಂಬಾಕು ಉತ್ಪನ್ನಗಳನ್ನು ನಿಷೇಧಿಸಲಾಗಿದ್ದರೂ ಸಹ ಕೆಲವು ಸ್ಥಳಗಳಲ್ಲಿ ಮಾರಾಟ ಮಾಡುತ್ತಿರುವದು ಕಂಡುಬಂದಿದ್ದು, ಅಂತಹ ಅಂಗಡಿಗಳ ವಿರುದ್ಧ ದಂಡ ವಿಧಿಸಿ ▶▶3ನೇ ಪುಟಕ್ಕೆ

ದಾಳಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ, ತಾಲುಕಾ ಆರೋಗ್ಯ ಶಿಕ್ಷಣಾಧಿಕಾರಿ ರಾಜೇಂದ್ರ ಗಡಾದ, ಪೊಲೀಸ್ ಇಲಾಖೆಯ ಪ್ರವೀಣ ವೈ, ಸಿ.ಆರ್. ಹಾದಿಮನಿ, ಎಸ್.ಎಂ.ಬೆಳ್ಳಮ್ಮನವರ, ಸಾಮಾಜಿಕ ಕಾರ್ಯಕರ್ತೆ ಬಸಮ್ಮ ಚಿತ್ತರಗಿ, ರಮೇಶ ಚಕ್ಕಡಿ ಹಾಗೂ ಫಕೀರೇಶ ಖಾನಾಪೂರ ಉಪಸ್ಥಿತರಿದ್ದರು.

# ಕಾನೂನುಗಳ ಬಗ್ಗೆ ತಿಳುವಳಿಕೆ ಇರಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಾನೂನು ಅರಿವು–ನೆರವು ಕಾರ್ಯಕ್ರಮಗಳು ಬಡವರು, ಹಿಂದುಳಿದವರು ಮತ್ತು ದೌರ್ಜನ್ಯಕ್ಕೊಳಗಾದವರಿಗೆ ಉಚಿತ ಕಾನೂನು ಸಲಹೆ ಮತ್ತು ಸಹಾಯ ನೀಡುವುದು, ಕಾನೂನಿನ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಸಾರ್ವಜನಿಕರಿಗೆ ತಮ್ಮ ಹಕ್ಕುಗಳ ಬಗ್ಗೆ ತಿಳುವಳಿಕೆ ನೀಡುವ ಗುರಿಯನ್ನು ಹೊಂದಿವೆ ಎಂದು ರೋಣ ತಹಸೀಲ್ದಾರ ನಾಗರಾಜ್ ಕೆ ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ತಾಲೂಕಾಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಎಸ್ಸಿ–ಎಸ್ಟಿ ಕಾನೂನು ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಷ್ಟ್ರೀಯ, ರಾಜ್ಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು, ವಕೀಲರ ಸಂಘಗಳು ಮತ್ತು ಸರ್ಕಾರಿ ಇಲಾಖೆಗಳು ಸಹಯೋಗದೊಂದಿಗೆ ಕಾನೂನು ಶಿಬಿರಗಳು, ಕಾರ್ಯಾಗಾರಗಳು, ಉಪನ್ಯಾಸಗಳು ಮತ್ತು ಜಾಗೃತಿ ಮೂಡಿಸುವ ಕರಪತ್ರಗಳ ವಿತರಣೆ ನಡೆಸಲಾಗುತ್ತದೆ. ಸಾರ್ವಜನಿಕರು ವಿಶೇಷವಾಗಿ ಪರಿಶಿಷ್ಟ ಜಾತಿ ಪರಿಶಿಷ್ಠ ಪಂಗಡದವರು ತಮ್ಮ ರಕ್ಷಣೆಗಾಗಿ ಇರುವ ಕಾನೂನುಗಳ ಬಗ್ಗೆ ಅರಿವು ಹೊಂದುವುದು ಮುಖ್ಯವಾಗಿದೆ ಎಂದರು. ತಾ.ಪಂ ಇಓ ಚಂದ್ರಶೇಖರ ಕಂದಕೂರ ಮಾತನಾಡಿ, ಸಮಾಜದಲ್ಲಿ ಅನ್ಯಾಯಕ್ಕೊಳಗಾಗಿದ್ದರೆ ಅಥವಾ ಸರ್ಕಾರದ ಯೋಜನೆಗಳನ್ನು ನೀಡಲು ಅಧಿಕಾರಿಗಳು ಸತಾಯಿಸುತ್ತಿದ್ದರೆ, ಅಂತಹವರ ಬಗ್ಗೆ ಮಾಹಿತಿ ನೀಡಿದಲ್ಲಿ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ಸಂಘದ ರೋಣ ತಾಲೂಕಾಧ್ಯಕ್ಷ ಬಸವರಾಜ ತಳವಾರ ಮಾತನಾಡಿ, ಸಂವಿಧಾನದಡಿಯಲ್ಲಿ ಪ್ರತಿಯೊಬ್ಬರೂ ಕಾನೂನು ಅರಿವು ಪಡೆದುಕೊಂಡು ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಮುಂದಾಗಬೇಕು ಎಂದರು.

ಗ್ರಾ.ಪಂ ಅಧ್ಯಕ್ಷೆ ಲಲಿತಾ ರಾಠೋಡ ಅಧ್ಯಕ್ಷತೆ ವಹಿಸಿದ್ದರು. ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಗೀತಾ ಆಲೂರ, ಪಿಎಸ್ಐ ಐಶ್ವರ್ಯ ನಾಗರಾಳ, ಬಸವರಾಜ ವೀರಾಪುರ, ರಮೇಶ ಕಡೆಮನಿ, ಹನುಮಂತಪ್ಪ ದ್ವಾಸಲ, ಬಸವರಾಜ ಪಲ್ಲೇದ, ವಕೀಲ ಮಂಜುನಾಥ ಚೌಡರ, ಶಿಕ್ಷಕ ಡಿ.ಎಚ್. ಪರಂಗಿ ಪಾಲ್ಗೊಂಡಿದ್ದರು. ಜಿ.ಬಿ. ಕೊಣ್ಣೂರ ನಿರ್ವಹಿಸಿದರು.



## ನ್ಯಾಷನಲ್ ಹೆರಾಲ್ಡ್ ಜಾಹೀರಾತು ವಿವಾದ: ಹಣಕಾಸಿನ ದಾಖಲೆ ಕೇಳಿ ಡಿಕೆ ಸಹೋದರರಿಗೆ ನೋಟಿಸ್



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರದಿಂದ ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ಬೇರೆ ಯಾವುದೇ ರಾಷ್ಟ್ರೀಯ ದಿನಪತ್ರಿಕೆಗಿಂತ ಹೆಚ್ಚಿನ ಜಾಹೀರಾತು ನಿಧಿ ದೊರೆತಿದೆ ಎಂದು ವರದಿಯಾಗಿದೆ, ಇದು ಸಾರ್ವಜನಿಕ ಹಣದ ಬಳಕೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಇಂಡಿಯಾ ಟುಡೇ ಮತ್ತು ಸರ್ಕಾರಿ ದಾಖಲೆಗಳು ಪಡೆದ ವಿವರಗಳ ಪ್ರಕಾರ, ಕರ್ನಾಟಕದಲ್ಲಿ ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ಕಡಿಮೆ ಓದುಗರಿದ್ದಾರೆ ಮತ್ತು ಪ್ರಸರಣ ಶೂನ್ಯ ಎಂದು ಹೇಳಲಾಗಿದ್ದರೂ, ರಾಜ್ಯ ಸರ್ಕಾರದ ಜಾಹೀರಾತು ಬಜೆಟ್‌ನಿಂದ ಅದಕ್ಕೆ ಕೋಟ್ಯಂತರ ರೂಪಾಯಿಗಳನ್ನು ಪಾವತಿಸಲಾಗಿದೆ ಎಂದು ಆರೋಪಿಸಲಾಗಿದೆ.

ಇದು ಸತತ ಎರಡು ವರ್ಷಗಳ ಕಾಲ ಕರ್ನಾಟಕದ ರಾಷ್ಟ್ರೀಯ ವೃತ್ತಪತ್ರಿಕೆ ಜಾಹೀರಾತು ವೆಚ್ಚದ ಏಕೈಕ ಅತಿದೊಡ್ಡ ಫಲಾನುಭವಿಯಾಗಿ ಹೊರಹೊಮ್ಮಿದೆ ಎಂದು ವರದಿಯಾಗಿದೆ.

2023–24ರಲ್ಲಿ ನ್ಯಾಷನಲ್ ಹೆರಾಲ್ಡ್‌ಗೆ 1.90 ಕೋಟಿ ರೂ. ಹಂಚಿಕೆಯಾಗಿದೆ ಎಂದು ಅಂಕಿಅಂಶಗಳು ತೋರಿಸಿವೆ, ನಂತರ 2024–25ರಲ್ಲಿ ಸುಮಾರು 1 ಕೋಟಿ ರೂ. (99 ಲಕ್ಷ ರೂ.) ಹಂಚಿಕೆಯಾಗಿದೆ.

ಹೋಲಿಸಿದರೆ, ಹಲವಾರು ಸುಸ್ಥಾಪಿತ ರಾಷ್ಟ್ರೀಯ ಪತ್ರಿಕೆಗಳು ತೀರಾ ಕಡಿಮೆ ಪಡೆದಿವೆ ಎಂದು ಹೇಳಲಾಗುತ್ತದೆ, ಕೆಲವು ನ್ಯಾಷನಲ್ ಹೆರಾಲ್ಡ್‌ಗೆ ಹಂಚಿಕೆಯಾದ ಮೊತ್ತದ ಅರ್ಧದಷ್ಟು ಸಹ ಪಡೆದಿಲ್ಲ ಎಂದು ವರದಿಯಾಗಿದೆ.

## ಸಾಮೂಹಿಕ ಸತ್ಯನಾರಾಯಣ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಗದಗ ತಾಲೂಕು, ಗದಗ ಸಿಟಿ ವಲಯದಿಂದ ಸಾಮೂಹಿಕ ಸತ್ಯನಾರಾಯಣ ಪೂಜೆ, ಸಭಾ ಕಾರ್ಯಕ್ರಮವನ್ನು ನಗರದ ಸಂಸ್ಕೃತ ಪಾಠಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಓಂಕಾರೇಶ್ವರ ಹಿರೇಮಠದ ಪಟ್ಟಾಧ್ಯಕ್ಷರಾದ ಷ.ಬ್ರ. ಶ್ರೀ ಫಕೀರೇಶ್ವರ ಸ್ವಾಮೀಜಿ ವಹಿಸಿ ಆಶೀರ್ವಚನ ನೀಡಿದರು. ಅಧ್ಯಕ್ಷತೆಯನ್ನು ಮಹಿಳಾ ಒಕ್ಕೂಟದ ಅಧ್ಯಕ್ಷರಾದ ಕೀರ್ತಿ ಜಕನೂರು ವಹಿಸಿದ್ದರು.

ಕ್ರಾಂತಿಸೇನಾ ಗದಗ ಜಿಲ್ಲಾಧ್ಯಕ್ಷ ಬಾಬು ಬಾಕಳೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಆರ್ಥಿಕವಾಗಿ ಮಹಿಳೆಯರು ಸಬಲರಾಗಲು ಧರ್ಮಸ್ಥಳ ಸಂಸ್ಥೆ ಸಹಾಯ ಮಾಡುತ್ತದೆ. ಮಹಿಳೆಯರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ ಪಾಲ್ಗೊಂಡಿದ್ದರು. ಯೋಜನಾಧಿಕಾರಿ ಉಮಾ ಎನ್.ಜಿ ಸಂಸ್ಥೆಯ ಚಟುವಟಿಕೆಗಳನ್ನು ತಿಳಿಸಿದರು.

ಸುಧೀರ ಕಾಟಿಗಾರ, ಡಾ. ಗಣೇಶ ಸುಲ್ತಾನಪುರ ಮಾತನಾಡಿದರು. ಪದ್ಮಾವತಿ ಪರಶುರಾಮ ಕಟಿಗಿ, ನಾಗರೆಡ್ಡಿ ತಿಮ್ಮಣ್ಣ ನಿಡಗುಂದಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಕಿರಣ ಎಮ್ ಸ್ವಾಗತಿಸಿ ಕಾರ್ಯಕ್ರಮ ನಿರ್ವಹಿಸಿದರು.

### ರಾಜ್ಯ ಮಟ್ಟದ ವಿಜ್ಞಾನ ವಸ್ತುಪ್ರದರ್ಶನ ಕಾರ್ಯಕ್ರಮದಲ್ಲಿ ಶಾಸಕ ಎನ್.ಎಚ್. ಕೋನರಡ್ಡಿ

# ಪ್ರಶ್ನಿಸುವ ಮಗುವೇ ಭವಿಷ್ಯದ ವಿಜ್ಞಾನಿ

■ವಿಜಯಸಾಕ್ಷಿ ಸುದ್ದಿ, ನವಲಗುಂದ

ವಿಜ್ಞಾನ ಪ್ರದರ್ಶನ ಎಂದರೆ ಕೇವಲ ಮಾದರಿಗಳ ಪ್ರದರ್ಶನವಲ್ಲ. ಇದು ಸೃಜನಶೀಲತೆ ಮತ್ತು ಕುತೂಹಲದ ಹಬ್ಬ. ವಿದ್ಯಾರ್ಥಿಗಳು ತಮ್ಮ ಕಲ್ಪನೆಗಳನ್ನು, ಪರಿಶ್ರಮವನ್ನು ಮತ್ತು ವೈಜ್ಞಾನಿಕ ಚಿಂತನೆಯುಳ್ಳ ನವೀನ ಆಲೋಚನೆಗಳನ್ನು ಇಲ್ಲಿ ಪ್ರದರ್ಶಿಸುತ್ತಿದ್ದಾರೆ. ಪ್ರತಿ ಯೋಜನೆಯ ಹಿಂದೆ ಇರುವ ಶ್ರಮ, ಪರಿಶೀಲನೆ, ಪ್ರಯೋಗ ಹಾಗೂ ಅರಿವು ಅಮೂಲ್ಯವಾದದ್ದು. ಪ್ರಶ್ನಿಸುವಿಕೆಯೇ ವಿಜ್ಞಾನದ ತಳಹದಿಯಾಗಿದ್ದು, ಪ್ರಶ್ನಿಸುವ ಮಗುವೇ ಭವಿಷ್ಯದ ವಿಜ್ಞಾನಿ ಎಂದು ನವಲಗುಂದ ಶಾಸಕ ಎನ್.ಹೆಚ್. ಕೋನರಡ್ಡಿ ಹೇಳಿದರು.

ರಾಯಾಪುರದ ಜ್ಞಾನವಿಕಾಸ ತರಬೇತಿ ಸಂಸ್ಥೆಯಲ್ಲಿ ಏರ್ಪಡಿಸಿದ್ದ ರಾಜ್ಯ ಮಟ್ಟದ ವಿಜ್ಞಾನ ವಸ್ತುಪ್ರದರ್ಶನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಇಂದು ಮಾಡುತ್ತಿರುವುದು ನಿಜವಾದ ವಿಜ್ಞಾನಿಯ ಕೆಲಸವೇ ಆಗಿದೆ. ವಸ್ತುಪ್ರದರ್ಶನದಲ್ಲಿ ನೀವು ಗಮನಿಸುತ್ತೀರಿ, ಪ್ರಶ್ನಿಸುತ್ತೀರಿ, ಊಹಿಸುತ್ತೀರಿ, ಪ್ರಯೋಗ ಮಾಡುತ್ತೀರಿ ಮತ್ತು ಕಂಡುಹಿಡಿಯುತ್ತೀರಿ. ಈ ಪ್ರಕ್ರಿಯೆಯೇ ನಿಮಗೆ ಆತ್ಮವಿಶ್ವಾಸ ನೀಡುತ್ತದೆ ಮತ್ತು ಸಮಸ್ಯೆಗಳನ್ನು ವೈಜ್ಞಾನಿಕ ದೃಷ್ಟಿಕೋನದಿಂದ ನೋಡುವ ಶಕ್ತಿಯನ್ನು ನೀಡುತ್ತದೆ ಎಂದರು.



ವಿಶೇಷ ಆಹ್ವಾನಿತರಾಗಿ ಭಾಗವಹಿಸಿದ್ದ ಬೆಳಗಾವಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾದ ಡಾ. ಈಶ್ವರ ಉಳ್ಳಾಗಡ್ಡಿ ಮಾತನಾಡಿ, ವಿಜ್ಞಾನ ವಿಷಯವು ಪಾಠ-ಪುಸ್ತಕಗಳಲ್ಲಿ ಮಾತ್ರ ಸೀಮಿತವಾಗಿಲ್ಲ. ನಮ್ಮ ದಿನನಿತ್ಯದ ಜೀವನದ ಪ್ರತಿಯೊಂದು ಹೆಜ್ಜೆಯಲ್ಲೂ ವಿಜ್ಞಾನ ಇದೆ. ನಾವು ಬಳಸುವ ಮೊಬೈಲ್ ಫೋನ್‌ಗಳಿಂದ ಹಿಡಿದು ವಿದ್ಯುತ್, ವೈದ್ಯಕೀಯ ಚಿಕಿತ್ಸೆಗಳು, ಸಂಚಾರ ಸೌಲಭ್ಯಗಳು, ಬಾಹ್ಯಾಕಾಶ ಸಂಶೋಧನೆಗಳವರೆಗೆ ಎಲ್ಲವೂ ವಿಜ್ಞಾನದ ಕೊಡುಗೆ. ಪಾಲಕರೂ ಕೂಡ ತಮ್ಮ ಮಕ್ಕಳ ಕುತೂಹಲವನ್ನು ಪ್ರೋತ್ಸಾಹಿಸಬೇಕು. ಅವರಿಗೆ ಪ್ರಯೋಗ ಮಾಡಲು ಅವಕಾಶ ನೀಡಬೇಕು. ಇಂದಿನ ಪ್ರಯೋಗ ಮಾಡುವ ಮಗು ನಾಳೆಯ ವಿಜ್ಞಾನಿಯಾಗಬಲ್ಲದು ಎಂದರು.

ಬೆಳಗಾವಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕ ಈಶ್ವರ ನಾಯಕ ಮಾತನಾಡಿ, ಸತತವಾಗಿ ಕಲಿಯಿರಿ, ಕಲ್ಪನೆ ಮಾಡಿ ಮತ್ತು ಪ್ರಯೋಗಗಳನ್ನು ಮುಂದುವರಿಸಿ. ಶಿಕ್ಷಕರು ಮಕ್ಕಳನ್ನು ವೈಜ್ಞಾನಿಕ ಮನೋಭಾವದತ್ತ ದಾರಿ ತೋರುತ್ತಿರುವ ಕಾರ್ಯವು ಅವರನ್ನು ಭವಿಷ್ಯದ ವಿಜ್ಞಾನ, ವೈದ್ಯಕೀಯ, ಇಂಜಿನಿಯರಿಂಗ್ ಮತ್ತು ಪರಿಸರ ಕ್ಷೇತ್ರದ ತಜ್ಞರನ್ನಾಗಿ ರೂಪಿಸಬಲ್ಲದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಉಪನಿರ್ದೇಶಕರು(ಅ) ಹಾಗೂ ಡಯಟ್ ಪ್ರಚಾರ್ಯ ಬಸವರಾಜ ನಾಲತವಾಡ ಮಾತನಾಡಿ, ಇಂದು ನಾವು ಎಲ್ಲರೂ ಒಂದೇ ವೇದಿಕೆಯಲ್ಲಿ ಸೇರಿರುವುದು ವಿಜ್ಞಾನ, ಸೃಜನಶೀಲತೆ ಮತ್ತು ಸಂಶೋಧನೆಯ ಸಂಭ್ರಮ ಆಚರಿಸಲು. ಈ ಪ್ರದರ್ಶನವು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುತ್ತದೆ. ಪ್ರಶ್ನಿಸಲು ಮತ್ತು ಉತ್ತರ ಕಂಡುಹಿಡಿಯಲು ಧೈರ್ಯ ನೀಡುತ್ತದೆ. ಕಲ್ಪನೆ ಮತ್ತು ಜ್ಞಾನವನ್ನು ನೈಜ ಜೀವನಕ್ಕೆ ಸಂಪರ್ಕಿಸುತ್ತದೆ. ಟೀಮ್ ವರ್ಕ್ ಮತ್ತು ಸಮಸ್ಯೆ ಪರಿಹಾರ ಕೌಶಲ್ಯಗಳನ್ನು ಬೆಳೆಸುತ್ತದೆ. ಹೊಸ ಆವಿಷ್ಕಾರಗಳತ್ತ ವಿದ್ಯಾರ್ಥಿಗಳನ್ನು ತೆಗೆದುಕೊಂಡು ಹೋಗುತ್ತದೆ ಎಂದರು.

ಸ್ಪರ್ಧೆಯಲ್ಲಿ ಒಟ್ಟು ವಿದ್ಯಾರ್ಥಿಗಳ 15 ವೈಯಕ್ತಿಕ ಮತ್ತು 10 ಗುಂಪು ವಿಭಾಗದಿಂದ, 10 ಶಿಕ್ಷಕರ ವಿಭಾಗದಿಂದ ಮಾದರಿಗಳನ್ನು ಆಯ್ಕೆ ಮಾಡಲಾಯಿತು. ಆಯ್ಕೆಯಾದವರು ತೆಲಂಗಾಣದಲ್ಲಿ ನಡೆಯುವ ದಕ್ಷಿಣ ಭಾರತ ವಲಯಮಟ್ಟದ ವಸ್ತುಪ್ರದರ್ಶನದಲ್ಲಿ ಭಾಗವಹಿಸಲಿದ್ದಾರೆ.

ಡಾ. ಗಾಯತ್ರಿ ಜೋಶಿ ಪ್ರಾರ್ಥಿಸಿದರು. ಉಪನಿರ್ದೇಶಕ (ಆಡಳಿತ) ಎಸ್.ಎಸ್. ಕೆಳದಿಮಠ ಸ್ವಾಗತಿಸಿದರು. ಡಯಟ್‌ನ ಹಿರಿಯ ಉಪನ್ಯಾಸಕರಾದ ದೀಪಕ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರ್‌ಎನ್ ಶೆಟ್ಟಿ ಸರಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳು ನಾಡಗೀತೆ ಹಾಡಿದರು. ಉಪನ್ಯಾಸರಾದ ಕುಮಾರ ಹುಲಗೂರ, ಗೀತಾ ಚುಳುಕಿ ಹಾಗೂ ಈರಯ್ಯ ವೆಂಕಟಾಪೂರಮಠ ಕಾರ್ಯಕ್ರಮ ನಿರೂಪಿಸಿದರು. ಉಪನ್ಯಾಸಕರಾದ ಪುಟ್ಟಪ್ಪ ಭಜಂತ್ರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಉಪನಿರ್ದೇಶಕರಾದ ಗಿರೀಶ ಪದಕಿ, ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿ ಡಾ. ರವಿಕುಮಾರ ಹೊಸಮನಿ, ಶ್ಯಾಮ್ ಮಲ್ಲನಗೌಡ್ರ, ನಾರಾಯಣ ಭಜಂತ್ರಿ, ಎಸ್.ಎಫ್. ಸಿದ್ದನಗೌಡರ, ಧಾರವಾಡ ಜಿಲ್ಲೆಯ ಎಲ್ಲ ತಾಲೂಕುಗಳ ಬಿಇಓ, ಡಿವೈಪಿಸಿ ಎಸ್.ಎಂ. ಹುಡೇದಮನಿ, ಶಿಕ್ಷಣಾಧಿಕಾರಿಗಳಾದ ಪಿ.ಕೆ. ಚಿಕ್ಕಮಠ, ನಫೀಸಾ ದಾವಲಸಾಬನವರ, ಹೊನ್ನಪ್ಪನವರ, ವಿ.ಎಫ್. ಚುಳುಕಿ, ಲಗಮಣ್ಣವರ, ಜಯಶ್ರೀ ವರೂರ, ರೂಪಾ ಪೂರಂಕರ, ಬಶೆಟ್ಟಿ, ಹೇಮರಾಜ ಅರ್ಜುನವರ, ಶ್ರೀಧರಪಾಟೀಲ ಕುಲಕರ್ಣಿ, ಹುದ್ದಾರ, ಜ್ಞಾನ ವಿಕಾಸ ಸಂಸ್ಥೆಯ ಪ್ರಾಂಶುಪಾಲರಾದ ಶ್ರೀನಿವಾಸ, ಡಯಟ್‌ನ ಹಿರಿಯ ಉಪನ್ಯಾಸಕರು, ಉಪನ್ಯಾಸಕರು, ವಿಷಯ ಪರಿವೀಕ್ಷಕರು, ಸಿಬ್ಬಂದಿಯವರು ಉಪಸ್ಥಿತರಿದ್ದರು.

### ಕಸಾಪ ವತಿಯಿಂದ ಮೈಲಾರಪ್ಪ ಮೆಣಸಗಿ ದತ್ತಿ ಉಪನ್ಯಾಸ

# ಶೈಕ್ಷಣಿಕ ಕ್ರಾಂತಿಗೆ ಸಾವಿತ್ರಿಬಾಯಿ ಮುನ್ನುಡಿ




■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾಜಿಕ ಸಮಸ್ಯೆಗಳಿಗೆ ಶಿಕ್ಷಣವೊಂದೇ ಪರಿಹಾರ ಎಂಬುದನ್ನು ಅರಿತು ಜ್ಯೋತಿಬಾ ಫುಲೆ ಅವರ ಸಹಕಾರದೊಂದಿಗೆ ಶಾಲೆಗಳನ್ನು ಸ್ಥಾಪಿಸುವ ಮೂಲಕ ಮಹಿಳೆಯರಿಗೆ ಮತ್ತು ಕೆಳವರ್ಗದ ಜನರಿಗೆ ಶಿಕ್ಷಣವನ್ನು ನೀಡಿ ಶೈಕ್ಷಣಿಕ ಕ್ರಾಂತಿಗೆ ಸಾವಿತ್ರಿಬಾಯಿ ಫುಲೆ ಮುನ್ನುಡಿ ಬರೆದರು ಎಂದು ಎಂ.ಜಿ.ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಉಪನ್ಯಾಸಕಿ ಡಾ. ಚೈತ್ರಾ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಮೈಲಾರಪ್ಪ ಮೆಣಸಗಿ ಸ್ಮರಣಾರ್ಥ ಜರುಗಿದ ಕುಮಾರವ್ಯಾಸ ಹಾಗೂ ಸಾವಿತ್ರಿಬಾಯಿ ಫುಲೆ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅಸ್ಪೃಶ್ಯತೆ, ಬಾಲ್ಯವಿವಾಹ, ಸತಿ ಸಹಗಮನ, ಕೇಶಮುಂಡನದಂತಹ ಅನಿಷ್ಠ ಆಚರಣೆಗಳ ವಿರುದ್ಧ ಹೋರಾಟವನ್ನು ಮಾಡಿದರು. ಮಹಿಳಾ ಸಬಲೀಕರಣಕ್ಕೆ ಸಾವಿತ್ರಿಬಾಯಿ ಫುಲೆ ಕೊಡುಗೆ ಅಪಾರವಾದುದು ಎಂದು ತಿಳಿಸಿದರು.

ಮೈಲಾರಪ್ಪ ಮೆಣಸಗಿಅವರ ಸಂಸ್ಮರಣೆ ಮಾಡಿದ ಕಾರ್ಯದರ್ಶಿ ಡಾ. ದತ್ತಪ್ರಸನ್ನ ಪಾಟೀಲ, ಶ್ರಮ ಸಂಸ್ಕೃತಿಯ ಮೂಲಕ ಪ್ರಕಾಶನ ಕ್ಷೇತ್ರದಲ್ಲಿ ಅಪೂರ್ವ ಸಾಧನೆಯನ್ನು ಮಾಡಿ ಕಾನೂನು ಹಾಗೂ ಶೈಕ್ಷಣಿಕ ಪುಸ್ತಕಗಳನ್ನು ಪ್ರಕಟಿಸಿ ನಾಡಿನ ಶಿಕ್ಷಣ ಕ್ಷೇತ್ರವನ್ನು ವಿಸ್ತರಿಸಿ ಕೀರ್ತಿ ವಿದ್ಯಾನಿಧಿ ಪ್ರಕಾಶನದ ಮೈಲಾರಪ್ಪ ಮೆಣಸಗಿ ಅವರಿಗೆ ಸಲ್ಲುತ್ತದೆ ಎಂದರು.

ದತ್ತಿದಾನಿ ಜಯದೇವ ಮೆಣಸಗಿ ಮಾತನಾಡಿ, ಗದಗ ಜಿಲ್ಲಾ ಕಸಾಪ ರಾಜ್ಯದಲ್ಲಿಯೇ ಮಾದರಿಯಾಗಿ ಕಾರ್ಯ ನಿರ್ವಹಿಸುತ್ತಿದೆ. ಈಗಿರುವ ದತ್ತಿ ನಿಧಿಯನ್ನು ಹೆಚ್ಚಿಸಿ ತಮ್ಮ ತಂದೆಯವರ ಹೆಸರಿನಲ್ಲಿ ಮುಂದಿನ ವರ್ಷದಿಂದ ನಾಡಿನ ಪ್ರಕಾಶಕರೊಬ್ಬರಿಗೆ ಪ್ರತಿ ವರ್ಷ ಪ್ರಶಸ್ತಿ ನೀಡುವ ದಿಸೆಯಲ್ಲಿ ಪ್ರಯತ್ನಿಸಲಾಗುವದು ಎಂದು ತಿಳಿಸಿದರು.

ಕುಮಾರವ್ಯಾಸ ಜಯಂತಿ ಅಂಗವಾಗಿ ಹೆಸರಾಂತ ಗಮಕಿಗಳಾದ ವಾಸುದೇವಾಚಾರ್ಯ ಹೂಲಿ ಹಾಗೂ ಐಶ್ವರ್ಯ ಹೂಲಿ ಕುಮಾರವ್ಯಾಸ ಭಾರತದ ಪ್ರಸಂಗಗಳ ವಾಚನ ಮತ್ತು ವ್ಯಾಖ್ಯಾನ ನಡೆಸಿಕೊಟ್ಟರು. ಮಂಜುಳಾ ವೆಂಕಟೇಶಯ್ಯ ಸಾವಿತ್ರಿಬಾಯಿ ಫುಲೆ ಕುರಿತು ಕವನ ವಾಚಿಸಿದರು. ಇದೇ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ವಿ.ಎಸ್. ದಲಾಲಿ ಅವರನ್ನು ಸನ್ಮಾನಿಸಲಾಯಿತು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಅಮರೇಶರಾಂಪೂರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಶ್ರೇಣೀಕೃತ ಸಾಮಾಜಿಕ ಸನ್ನಿವೇಶದಲ್ಲಿ ಮಹಿಳೆಯರಿಗೆ ಮತ್ತು ನಿಮ್ನ ವರ್ಗದವರಿಗೆ ಶಿಕ್ಷಣವನ್ನು ನಿರಾಕರಿಸಲಾಗಿತ್ತು. ಶೋಷಣೆಯಿಂದ ಜನ ನಲುಗುತ್ತಿದ್ದ ಸಂದರ್ಭದಲ್ಲಿ ಶಿಕ್ಷಣವನ್ನು ಮಂತ್ರದಂಡವಾಗಿಸಿಕೊಂಡು ಸಮಾನ ಸಮಾಜ ನಿರ್ಮಾಣಕ್ಕೆ ಫುಲೆ ದಂಪತಿಗಳು ಪ್ರಯತ್ನಿಸಿದರು. ಶಾಲೆ ಮತ್ತು ಆಶ್ರಮಗಳನ್ನು ಸ್ಥಾಪಿಸಿ ಮಹಿಳೆಯರ ಹಕ್ಕುಗಳಿಗಾಗಿ ಹೋರಾಟ ಮಾಡಿದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಿ.ಕೆ.ಎಚ್. ಶಾಸ್ತ್ರೀ, ಅರ್ಜುನ ಗೊಳಸಂಗಿ, ದೇವೇಂದ್ರ ನಾಯಕ, ಬಿ.ಬಿ. ಹೊಳಗುಂದಿ, ಜೆ.ಎ. ಪಾಟೀಲ, ಎ.ಎಂ. ಅಂಗಡಿ, ರತ್ನಕ್ಕ ಪಾಟೀಲ, ಸಿ.ಎಂ. ಮಾರನಬಸರಿ, ಜಿ.ಎ. ಪಾಟೀಲ, ಕೆ.ಎಸ್. ಪಲ್ಲೇದ, ಬಸವರಾಜ ನೆಲಜೇರಿ, ಉಮಾ ಕಣವಿ, ನೀಲಮ್ಮ ಅಂಗಡಿ, ರಾಜಶೇಖರ ಕರಡಿ, ಎಂ.ಎಫ್. ಡೋಣಿ, ಎಸ್.ಎಂ. ಗುಳಗುಳಿ, ಎಸ್.ಡಿ. ಗಾಂಜಿ, ಅಶೋಕ ಸತ್ಯರಡ್ಡಿ, ರಾಹುಲ ಗಿಡ್ನಂದಿ, ಎಂ.ಎಚ್. ಕಾಮನಹಳ್ಳಿ, ಸಂತೋಷಕುಮಾರ, ಎಸ್.ಎಂ. ಗುಳಗುಳಿ, ಡಿ.ಜಿ. ಕುಲಕರ್ಣಿ, ಬಸವರಾಜ ಗಣಪ್ಪನವರ, ರವೀಂದ್ರ ಜೋಶಿ, ಶ್ರೀಕಾಂತ ಹೂಲಿ, ಶರಣಪ್ಪ ಹೊಸಂಗಡಿ, ರಾಜಶೇಖರ ದಾನರಡ್ಡಿ, ಎಂ.ಎಂ. ಕಾಗದಗಾರ, ಬಿ.ಬಿ. ಪಾಟೀಲ, ರವಿ ದೇವರಡ್ಡಿ, ಗೋವಿಂದಜಿ, ಸುರೇಶ, ಜಾನ್ ಥಾಮಸ್, ಗಿರೀಶ ಪಂತರ, ಎ.ಸಿ. ಹಿರೇಮಠ, ಅಪ್ಪಣ್ಣ ಮುರಗೋಡ, ಸಿದ್ಧರಾಮ ಪಟ್ಟೇದ, ವಿ.ಕೆ. ದ್ಯಾಮನಗೌಡರ, ಆನಂದ ಹಡಪದ, ಜಗನ್ನಾಥ, ಕೆ.ಎಸ್. ಬಾಳಿಕಾಯಿ, ರತ್ನಾ ಪುರಂತರ, ಪದ್ಮಾ ಮೆಣಸಗಿ, ಹೇಮಾವತಿ ಹೂಲಿ, ರಾಧಿಕಾ ಜೋಶಿ, ಸುಧಾ ಬಳ್ಳಿ, ಅನಸೂಯಾ ಮಿಟ್ಟಿ, ನಾಗಪ್ಪ ಸುರಳಿಕೇರಿ, ಸುಧೀರ ಘೋರ್ಪಡೆ, ಯಶೋಧಾ ಗಿಡ್ನಂದಿ, ಬಸವರಾಜ ನೆಲಜೇರಿ, ಸುಮನ ಪಾಟೀಲ, ರತ್ನಾ ಫಾರ್ಗಿ, ಮಹಾಂತೇಶ ಬಾತಾಖಾನಿ, ರವಿ ಪೂಜಾರ, ಪಿ.ಆರ್. ಇನಾಮದಾರ, ಸತೀಶ ಕುಲಕರ್ಣಿ ಮೊದಲಾದವರು ಉಪಸ್ಥಿತರಿದ್ದರು.

# ಸ್ಥಳೀಯ ಚುನಾವಣೆಗೆ ಸಕಲ ಸಿದ್ಧತೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಕ್ಷದ ವರಿಷ್ಠರ ಸೂಚನೆಯಂತೆ ಮುಂಬರಲಿರುವ ಜಿಲ್ಲಾ ಪಂಚಾಯಿತಿ/ತಾಲೂಕು ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಜೆಡಿಎಸ್ ಪಕ್ಷ ಈಗಿನಿಂದಲೇ ಕಾರ್ಯಪ್ರವೃತ್ತವಾಗಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ಹೇಳಿದರು.


ಅವರು ಗುರುವಾರ ಶಿರಹಟ್ಟಿಯ ಜೆಡಿಎಸ್ ಕಚೇರಿಯಲ್ಲಿ ಕಾರ್ಯಕರ್ತರ ಪಕ್ಷ ಸೇರ್ಪಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೇಂದ್ರ ಸಚಿವ ಹಾಗೂ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರು ಶಿರಹಟ್ಟಿ ಮತಕ್ಷೇತ್ರದ ಬಗ್ಗೆ ವಿಶೇಷ ಕಾಳಜಿಯನ್ನು ಹೊಂದಿದ್ದರು.

ಗ್ರಾಮವಾಸ್ತವ್ಯ ಕಾರ್ಯಕ್ರಮದ ಮೂಲಕ ಇಡೀ ರಾಜ್ಯದ ಗಮನ ಸೆಳೆದಿದ್ದು ಇತಿಹಾಸ. ಅವರ ಅವಧಿಯಲ್ಲಿ ಮತಕ್ಷೇತ್ರದ ಹಲವಾರು ರೈತರು ಸಾಲಮನ್ನಾ ಯೋಜನೆಯ ಸದುಪಯೋಗವನ್ನು ಪಡೆದುಕೊಂಡಿದ್ದಾರೆ. ಅವರ ಅವಧಿಯಲ್ಲಿಯ ಜನಪರ ಕಾರ್ಯಕ್ರಮಗಳನ್ನು ಕಾರ್ಯಕರ್ತರ ಮೂಲಕ ಮನೆ ಮನೆಗೆ ತೆರಳಿ ಪ್ರಚಾರ ಮಾಡಿ, ಜೆಡಿಎಸ್ ಪಕ್ಷ ಸಂಘಟನೆಯನ್ನು ಮಾಡಲಾಗುವುದು. ವಿಶೇಷವಾಗಿ ಯುವಕರಿಗೆ ಪಕ್ಷದಲ್ಲಿ ಪ್ರೋತ್ಸಾಹ ಮತ್ತು ಆದ್ಯತೆಯನ್ನು ನೀಡಲಾಗುತ್ತಿದೆ ಎಂದರು.

ಶಿರಹಟ್ಟಿ ಮತಕ್ಷೇತ್ರದ ಜೆಡಿಎಸ್ ಅಧ್ಯಕ್ಷ ಶಂಕರಣ್ಣ ಬಾಳಿಕಾಯಿ, ತಾಲೂಕಾಧ್ಯಕ್ಷ ಶರಣಪ್ಪ ಹೂಗಾರ, ತಾಲೂಕಾ ಮಹಿಳಾಧ್ಯಕ್ಷೆ ಲಲಿತಾ ಕಲ್ಲಪ್ಪನವರ, ಜಾಕೀರಹುಸೇನ ಹವಾಲ್ದಾರ, ಹನಮಂತ್ಪ ಮರಿಗೌಡ್ರ, ಜಯರಾಜ ವಾಲಿ, ರಾಯಸಾಬ ಢಾಲಾಯತ, ವಿನಾಯಕ ಪರಬತ, ಶಿವಜೋಗೆಪ್ಪ ಆದಿ, ಹಾಜಿಅಲಿ ಕೊಪ್ಪಳ ಮುಂತಾದವರು ಉಪಸ್ಥಿತರಿದ್ದರು.

# ಕರ್ನಾಟಕ ರಾಜ್ಯ ಯೋಗಾಸನ ಕ್ರೀಡಾಕೂಟ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಬೆಂಗಳೂರು ಇವರು ಶ್ರೀ ಸ್ವಾಮಿ ವಿವೇಕಾನಂದ ಯೋಗ ಮತ್ತು ಸಂಸ್ಕತಿ ವಿಕಾಸ ಸಂಘ ಗೋಕಾಕ ಇವರ ಸಹಯೋಗದಲ್ಲಿ 4ನೇ ಕರ್ನಾಟಕ ರಾಜ್ಯ ಯೋಗಾಸನ ಕ್ರೀಡಾಕೂಟವನ್ನು ಫೆ. 1ರಂದು ಗೋಕಾಕದ ಹಿಲ್ಸ್ ಗಾರ್ಡನ್ ರಸ್ತೆಯಲ್ಲಿರುವ ಶ್ರೀ ಮಹಾಲಕ್ಷ್ಮೀ ಸಭಾಭವನದಲ್ಲಿ ಆಯೋಜಿಸಲಾಗಿದೆ.

ಕ್ರೀಡಾಕೂಟದಲ್ಲಿ ಸ್ಪರ್ಧಿಗಳ ವಯೋಮಿತಿ (8 ರಿಂದ 60 ವರ್ಷ ಮೇಲ್ಪಟ್ಟು) ಆಧಾರದ ಮೇರೆಗೆ ಒಟ್ಟು 13 ವಿಭಾಗಗಳಲ್ಲಿ ಸ್ತ್ರೀ-ಪುರುಷರಿಗಾಗಿ ಪ್ರತ್ಯೇಕವಾಗಿ ಸ್ಪರ್ಧೆಗಳನ್ನು ನಡೆಸಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸಿದ ಸ್ಪರ್ಧಿಗಳೆಲ್ಲರೂ ಸ್ಪರ್ಧೆಗಾಗಿ ನಿಗದಿಪಡಿಸಿದ 10 ಆಸನಗಳಲ್ಲಿ ತಮಗಿಷ್ಟವಾದ 5 ಆಸನಗಳನ್ನು ಆಯ್ಕೆ ಮಾಡಿಕೊಂಡು ಪ್ರದರ್ಶಿಸಬೇಕು ಮತ್ತು ಪ್ರದರ್ಶನದ ಸಮಯದಲ್ಲಿ ಆಸನದ ಅಂತಿಮ ಸ್ಥಿತಿ (ಪೂರ್ಣ ಭಂಗಿ)ಯಲ್ಲಿ 15 ಸೆಕೆಂಡುಗಳ ಕಾಲ ಸ್ಥಿರವಾಗಿರಬೇಕು.

**ನಿಗದಿಪಡಿಸಿದ ಯೋಗಾಸನಗಳು:** ವೃಕ್ಷಾಸನ, ತ್ರಿಕೋಣಾಸನ, ಉಷ್ಟ್ರಾಸನ, ಪಶ್ಚಿಮೋತ್ಥಾನಾಸನ, ಸರ್ವಾಂಗಾಸನ, ಮತ್ಸ್ಯಾಸನ, ಅರ್ಧ ಮತ್ಸ್ಯೇಂದ್ರಾಸನ, ಗೋಮುಖಾಸನ, ಧನುರಾಸನ, ಶಲಭಾಸನ ಈ ಎಲ್ಲ ಆಸನಗಳ ಪರಿಶೀಲನೆಗೆ ಆಧಾರ ಗ್ರಂಥ ಯೋಗಾಚಾರ್ಯ ಬಿ.ಕೆ.ಎಸ್. ಅಯ್ಯಂಗಾರವರ 'ಯೋಗ ದೀಪಿಕಾ' ಆಗಿದೆ.

ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಗಳಿಸಿ ವಿಜೇತರಾದವರಿಗೆ ಆಕರ್ಷಕ ಮೆಡಲ್, ಮೆರಿಟ್ ಪ್ರಮಾಣಪತ್ರ ಮತ್ತು 4, 5, 6ನೇ ಸ್ಥಾನ ಗಳಿಸಿದವರಿಗೆ ಮೆರಿಟ್ ಸರ್ಟಿಫಿಕೇಟ್ ಹಾಗೂ ಭಾಗವಹಿಸಿದವರೆಲ್ಲರಿಗೂ ಪ್ರಾತಿನಿಧ್ಯ ಪತ್ರಗಳನ್ನು ನೀಡಲಾಗುವುದು. ವಿಶೇಷವಾಗಿ ಹೆಚ್ಚಿನ ಸಂಖ್ಯೆ (10-25)ಯಲ್ಲಿ ಸ್ಪರ್ಧಿಗಳನ್ನೊಳಗೊಂಡ ತಂಡಗಳಿಗೆ ಟ್ರೋಫಿ ನೀಡಲಾಗುವುದು.

ಸ್ಪರ್ಧೆಗಳಲ್ಲಿ ಭಾಗವಹಿಸಲಿಚ್ಛಿಸುವ ಸ್ಪರ್ಧಿಗಳು https://forms.gle/CyGhzX7x3G7mbqa98 ಈ ಲಿಂಕ್ ಮೂಲಕ ದಿನಾಂಕ 15-1-2026ರೊಳಗೆ ಹೆಸರು ನೊಂದಾಯಿಸಿಕೊಳ್ಳಬೇಕು. ನಂತರದಲ್ಲಿ ಹೆಸರು ನೋಂದಣಿಗೆ ಅವಕಾಶವಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಎ. ನಟರಾಜ, ಕಾರ್ಯದರ್ಶಿ, ಕೆ.ಎಸ್.ಎ.ವಾಯ್.ಎಸ್.ಎ. ಬೆಂಗಳೂರು ಅಥವಾ ಅಧ್ಯಕ್ಷರು ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ (ದೂರವಾಣಿ ಸಂಖ್ಯೆ: 9845242465, 9448317188) ಈ ವಿಳಾಸದಲ್ಲಿ ಸಂಪರ್ಕಿಸಲು ಪ್ರಾಚಾರ್ಯ ಕೆ.ಎಸ್. ಪಲ್ಲೇದ ವಿನಂತಿಸಿದ್ದಾರೆ.

# ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಜ.14ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ನಿಮಿತ್ತ ಪೂರ್ವಸಿದ್ಧತಾ ಸಭೆಯು ಗುರುವಾರ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರ ಅಧ್ಯಕ್ಷತೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿತು.

ಜನವರಿ 14ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತದ ವತಿಯಿಂದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿಯನ್ನು ಸರಳವಾಗಿ ಹಾಗೂ ಸಾಂಕೇತಿಕವಾಗಿ ಆಚರಿಸಲು ಎಂದು ಸಭೆಯಲ್ಲಿ ನಿರ್ಧರಿಸಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಸಮಾಲೋಚನೆ ನಡೆಸಿದ ನಂತರ ಸಮುದಾಯದ ವತಿಯಿಂದ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಣೆಗೆ ಕ್ರಮ ವಹಿಸಲಾಗುವುದು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಮಾತನಾಡಿ, ಜಿಲ್ಲೆಯ ತಾಲೂಕು, ಗ್ರಾ.ಪಂ ಮಟ್ಟದಲ್ಲಿಯೂ ಸಹ ಜಯಂತಿ ಆಚರಣೆಗೆ ಕ್ರಮ ವಹಿಸಲು ನಿರ್ದೇಶನ ನೀಡಲಾಗುವುದು ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಸಮಾಜದ ಅಧ್ಯಕ್ಷರು, ಪದಾಧಿಕಾರಿಗಳು, ಹಿರಿಯರು, ಗಣ್ಯರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.



# ಟಿ.ಎಲ್. ರಾಜಕುಮಾರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಗೃಹರಕ್ಷಕ ದಳ ಗದಗ ಜಿಲ್ಲಾ ಕಚೇರಿಯ ಸಿಬ್ಬಂದಿ ಟಿ.ಎಲ್. ರಾಜಕುಮಾರ ಅವರು ಶಟಲ್ ಬ್ಯಾಡ್ಮಿಂಟನ್ ಸಿಂಗಲ್ಸ್ ಮತ್ತು ಡಬಲ್ಸ್‌ನಲ್ಲಿ ಪ್ರಥಮ ಸ್ಥಾನ (45 ವರ್ಷ ಮೇಲ್ಪಟ್ಟು ವಿಭಾಗದಲಿ) ಹಾಗೂ ಶಟಲ್ ಬ್ಯಾಡ್ಮಿಂಟನ್ ಸಿಂಗಲ್ಸ್‌ನಲ್ಲಿ ದ್ವಿತೀಯ ಸ್ಥಾನ (45 ವರ್ಷ ಒಳಪಟ್ಟು ವಿಬಾಗದಲ್ಲಿ) ಪಡೆದ ಹಿನ್ನೆಲೆಯಲ್ಲಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲೆಯ ಗೃಹರಕ್ಷದಳ ಇಲಾಖೆಯ ಜಿಲ್ಲಾ ಸಮಾದೇಷ್ಠ ಚನ್ನಾರಡ್ಡಿ ಬಸವರಾಜ ಗೊಳರಡ್ಡಿರವರು, ಅಡ್ಜುಟೆಂಟ್ ಕೆ.ಸಿ. ವಕ್ಕಳದ, ಜಿಲ್ಲಾ ಬೋಧಕ ಕಿರಣಕುಮಾರ ಕಟಗಿ, ಘಟಕಾಧಿಕಾರಿಗಳಾದ ಎಸ್.ಎಫ್. ದೊಡ್ಡಮನಿ, ಸಿ.ಜಿ. ಮುದಿಯಪ್ಪನವರ, ಆರ್.ಎಂ. ಹುಡೇದ, ಸಿಬ್ಬಂದಿಗಳಾದ ಬಿ.ಡಿ. ನಾಯಕ, ಬಿ.ಎಸ್. ಬಸವರಡ್ಡಿ ಮುಂತಾದವರಿದ್ದರು.

# ಅಕ್ರಮ ಮದ್ಯ ಮಾರಾಟದಲ್ಲಿ ಅಧಿಕಾರಿಗಳೇ ಶಾಮೀಲು?!

▶▶ಮೊದಲನೇ ಪುಟದಿಂದ



ಈಗಾಗಲೇ ಹತ್ತಾರು ಬಾರಿ ಅಬಕಾರಿ ಇಲಾಖೆಯ ಗಮನಕ್ಕೆ ತರಲಾಗಿದೆ.

ಆದರೂ ಯಾವುದೇ ಪ್ರಯೋಜನವಾಗಿಲ್ಲ ಎಂದರು. ಗ್ರಾಮಸ್ಥರನ್ನು ಕುರಿತು ಪಿಎಸ್ಐ ಪ್ರಕಾಶ ಬಣಕಾರ, ನಿಮ್ಮ ಆಕ್ರೋಶ ನಮಗೆ ಅರ್ಥವಾಗುತ್ತದೆ. ಅಕ್ರಮ ಸಾರಾಯಿ ಮಾರಾಟವಾಗದಂತೆ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಸಮಾಧಾನಪಡಿಸಿದಾಗ, ಇದಕ್ಕೆ ಒಪ್ಪಿದ ಗ್ರಾಮಸ್ಥರು ಮನವಿ ಸಲ್ಲಿಸಿ ಪ್ರತಿಭಟನೆಯನ್ನು ಹಿಂಪಡೆದರು.

ಪ್ರತಿಭಟನೆಯಲ್ಲಿ ರತ್ನವ್ವ ಮಂಡಸೊಪ್ಪಿ, ಯಲ್ಲಮ್ಮ ರಾಯನಗೌಡ್ರ, ಭೀಮವ್ವ ಭಾವಿ, ಶೇಖವ್ವ ಪಾಟೀಲ, ಶಿವಗಂಗವ್ವ ಭೀಮನಗೌಡ್ರ ಮುಂತಾದವರಿದ್ದರು.

ತಾ.ಪಂ ಸಾಮರ್ಥ್ಯ ಸೌಧದಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಸೂಚನೆ

# ಅಧಿಕಾರಿಗಳಲ್ಲಿ ಪರಸ್ಪರ ಸಮನ್ವಯತೆ ಇರಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ಷೇತ್ರದಲ್ಲಿ ಸರಕಾರದಿಂದ ಮಂಜೂರಿಯಾದ ಅನುದಾನದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕೆಲಸಗಳಿಗೆ ಅಡ್ಡಿಪಸುವವರ ವಿರುದ್ಧ ಗುತ್ತಿಗೆದಾರರು, ಆಯಾ ಇಲಾಖೆಯ ಅಧಿಕಾರಿಗಳು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸುವಂತೆ ಶಾಸಕ ಡಾ. ಚಂದ್ರು ಲಮಾಣಿ ಸೂಚನೆ ನೀಡಿದರು.

ಅವರು ಗುರುವಾರ ತಾ.ಪಂ ಸಾಮರ್ಥ್ಯ ಸೌಧದಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಅಭಿವೃದ್ಧಿ ಕಾಮಗಾರಿಗಳಿಗೆ ಸಲಹೆ-ಸೂಚನೆ, ಸಹಕಾರ ನೀಡುವ ಕಾರ್ಯವಾಗಬೇಕು. ವಿನಾಕಾರಣ, ದುರುದ್ದೇಶದಿಂದ ಕಾಮಗಾರಿಗಳಿಗೆ ಅಡ್ಡಿಪಡಿಸುವ ಕಾರ್ಯವಾಗಬಾರದು ಎಂದು ಹೇಳಿದರು. ಪಂಚಾಯತ್‌ರಾಜ್ ಇಲಾಖೆಯ ಅಂಗನವಾಡಿಗಳಿಗೆ ಜೆಜೆಎಮ್ ಮುಖಾಂತರ ನೀರು ಸರಬರಾಜು ಮಾಡುವ ವಿಷಯಕ್ಕೆ ಸಂಬಂಧಿಸಿದಂತೆ ಸಿಡಿಪಿಓ ಮತ್ತು ಆರ್‌ಡಿಪಿಆರ್ ಇಂಜಿನಿಯರ್‌ಗಳ ವಿಭಿನ್ನ ಹೇಳಿಕೆ ಕೇಳಿದ ಶಾಸಕರು, ಅಧಿಕಾರಿಗಳು ಸಮನ್ವತೆಯಿಂದ ಕಾರ್ಯ ನಿರ್ವಹಿಸದಿದ್ದರೆ ಕಾಮಗಾರಿಗಳು ಅಪೂರ್ಣ ಇಲ್ಲವೇ ಸ್ಥಗಿತಗೊಳ್ಳುತ್ತವೆ. ಅಧಿಕಾರಿಗಳಲ್ಲಿ ಪರಸ್ಪರ ಸಮನ್ವಯತೆ ಇರಲಿ ಎಂದು ಸೂಚಿಸಿದರು.




ನಿರ್ಮಿತಿ ಕೇಂದ್ರದವರು ಅಂಗನವಾಡಿ ಕೇಂದ್ರಗಳಿಗೆ ಭೇಟಿ ಕೊಟ್ಟು ಅಂದಾಜು ಪಟ್ಟಿ ತಯಾರು ಮಾಡಿ ಹೈಟೆಕ್ ಶೌಚಾಲಯ ಕಟ್ಟುವ ಯೋಜನೆ ಹಾಕಿಕೊಳ್ಳಿ. ಗಂಗಾ ಕಲ್ಯಾಣ ಬೋರ್‌ವೆಲ್ ಹಾಕಿಸಿಕೊಂಡವರಿಗೆ ವಿದ್ಯುತ್ ಸಂಪರ್ಕ ಕೊಡಿ ಎಂದು ಹೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

ಶಿಕ್ಷಣ ಇಲಾಖೆಯ ಚರ್ಚೆಯಲ್ಲಿ ಶೌಚಾಲಯ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮಾಹಿತಿ ನೀಡಿ, ಶೌಚಾಲಯಗಳು ಅಪೂರ್ಣಗೊಂಡಿವೆ ಎಂದು ತಿಳಿಸಿದರು. ಇದಕ್ಕೆ ಶಾಲೆಗಳಲ್ಲಿ ಶೌಚಾಲಯ ನಿರ್ಮಾಣದ ಕ್ರಿಯಾಯೋಜನೆ ತಯಾರಿಸುವ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಸಂಬಂಧಪಟ್ಟ ಇಲಾಖೆ ಇಂಜಿನಿಯರ್‌ಗಳು ಚರ್ಚಿಸಿ ಕ್ರಮ ಕೈಗೊಳ್ಳಬೇಕು ಎಂದರು.

ಅಲ್ಪಸಂಖ್ಯಾತ ಇಲಾಖೆಯ ಅಧಿಕಾರಿಗೆ ಸರಕಾರದಿಂದ ಮೌಲಾನಾ ಅಬ್ದುಲ್ ಕಲಾಂ ಶಾಲೆಗೆ ಅನುದಾನ ಲಭ್ಯವಾಗಲಿದ್ದು, ಒಂದು ಎಕರೆ ನಿವೇಶನ ಗುರುತಿಸುವಂತೆ ಸೂಚಿಸಿದರು. ಆದರ್ಶ ಗ್ರಾಮ ಯೋಜನೆಗೆ ರಾಜ್ಯ ಸರಕಾರದಿಂದ ಅನುದಾನ ಬರುತ್ತಿಲ್ಲ. ತಮ್ಮತಮ್ಮ ಇಲಾಖೆಯ ಕ್ರಿಯಾಯೋಜನೆ ಸಿದ್ಧಪಡಿಸಿ ಎಂದು ಎಲ್ಲ ಇಲಾಖೆಗಳ ಅಧಿಕಾರಿಗಳಿಗೆ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ತಾ.ಪಂ ಆಡಳಿತ ಅಧಿಕಾರಿ ಎಂ.ವಿ. ಚಳಗೇರಿ ಮಾತನಾಡಿ, ಅಧಿಕಾರಿಗಳು ಸಭೆಗೆ ಬರುವಾಗ ಸಂಪೂರ್ಣ ಮಾಹಿತಿಯೊಂದಿಗೆ ಬರಬೇಕು ಮತ್ತು ಸಭೆ ಗಾಂಭೀರ್ಯತೆ ಅರಿತು ನಡೆದುಕೊಳ್ಳಬೇಕು ಎಂದರು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ ಇದ್ದರು. ಸಭೆಯಲ್ಲಿ ಶಿಕ್ಷಣ, ಸಮಾಜ ಕಲ್ಯಾಣ, ಆರೋಗ್ಯ, ಹೆಸ್ಕಾಂ, ಆಹಾರ, ತೋಟಗಾರಿಕೆ, ಕೃಷಿ, ಅಲ್ಪ ಸಂಖ್ಯಾತರ, ನಿರ್ಮಿತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದು ಮಾಹಿತಿ ನೀಡಿದರು.

# ಉತ್ತರಾಯಣದ ಈ ಕಾಲ ಬದಲಾವಣೆಯ ಪರ್ವ



■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದೂ ಧರ್ಮದಲ್ಲಿ ಮಕರ ಸಂಕ್ರಾಂತಿ ಹಬ್ಬವನ್ನು ಪವಿತ್ರ ಹಬ್ಬ ಎಂದು ಪರಿಗಣಿಸಲಾಗುತ್ತದೆ. ಶಾಸ್ತ್ರದ ಪ್ರಕಾರ ಸೂರ್ಯದೇವನು ಮಕರ ಚಕ್ರವನ್ನು ಪ್ರವೇಶಿಸಿದಾಗ ಮಕರ ಸಂಕ್ರಾಂತಿ ಎಂದು ಕರೆಯುತ್ತಾರೆ. ಉತ್ತರಾಯಣದ ಈ ಪರ್ವ ಬದಲಾವಣೆಗೆ ನಾಂದಿಯಾಗುತ್ತದೆ. ಅಂತೆಯೇ ಮಾನವನಲ್ಲಿಯೂ ಸಹ ಬದಲಾವಣೆ ಸಹಜವಾಗಿರುತ್ತದೆ. ಈ ಕಾಲದಲ್ಲಿ ಚಳಿ ತೊರೆದು ಸೂರ್ಯನ ಕಿರಣ ವ್ಯಾಪ್ತಿ ಮತ್ತು ಅದರ ಶಾಖ ಭೂಮಿಯ ಮೇಲೆ ಹೆಚ್ಚಾಗುತ್ತಾ ಹೋದಂತೆ ಅನೇಕ ಬದಲಾವಣೆ ಪ್ರಕೃತಿಯಲ್ಲಿಯೂ ಸಹ ನಾವು ನೋಡುತ್ತೇವೆ. ಬದಲಾವಣೆಗೆ ತಕ್ಕಂತೆ ನಮ್ಮ ಆಚಾರ-ವಿಚಾರ, ನಡತೆಗಳನ್ನು ಬದಲಾವಣೆ ಮಾಡಿಕೊಳ್ಳಬೇಕು ಎಂದು ವೀಣಾ ತಿರ್ಲಾಪುರ ಅಭಿಪ್ರಾಯಪಟ್ಟರು.

ಅಖಿಲ ಕರ್ನಾಟಕ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನ ವಿವಿಧೋದ್ದೇಶ ಟ್ರಸ್ಟ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರೇಮಾ ಮೇಟಿ ಮಾತನಾಡಿ, ಈ ಋತುಮಾನ ಮನುಷ್ಯನನ್ನು ದೈಹಿಕವಾಗಿ, ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿಯೂ ಕೂಡ ಬದಲಾವಣೆ ಮಾಡುತ್ತದೆ. ಇದು ಸುಗ್ಗಿಯ ಕಾಲ ಮತ್ತು ಹರ್ಷದ ಪರ್ವಕಾಲ ಎಂದು ನುಡಿದರು.

ಇದೇ ಸಂದರ್ಭದಲ್ಲಿ ದಿ. ಚಂದ್ರಶೇಖರಪ್ಪ ಬಸವಂತಪ್ಪ ಭೂಮರೆಡ್ಡಿ, ದಿ. ಸಂಜಯ್ ರೆಡ್ಡಿ ವೀರಪ್ಪ ಮಾಸರೆಡ್ಡಿ ಮತ್ತು ದಿ. ಕಿರಣ ಹನುಮಪ್ಪ ಮಧುರೆಡ್ಡಿಯವರಿಗೆ ಮೌನಚರಣೆ ಸಲ್ಲಿಸಲಾಯಿತು.

ವೇದಿಕೆಯ ಮೇಲೆ ಉಪಾಧ್ಯಕ್ಷರಾದ ಕಸ್ತೂರಿ ಹಿರೇಗೌಡರ್, ಖಜಾಂಚಿ ಸರೋಜಾ ಪೈಲ್ ಉಪಸ್ಥಿತರಿದ್ದರು. ನೀಲ ಮುದರಡ್ಡಿ, ಸುಮಂಗಲ ಪಾಟೀಲ್, ಅಕ್ಕಮ್ಮ ರೆಡ್ಡಿ, ಶಾಂತ ದೊಡ್ಡಮನಿ ಮುಂತಾದವರು ಪಾಲ್ಗೊಂಡಿದ್ದರು. ಕವಿತಾ ಕೊಣ್ಣೂರ್ ಪ್ರಾರ್ಥಿಸಿದರು. ಮಧು ಪಾಟೀಲ್ ನಿರೂಪಿಸಿದರು. ಭಾಗ್ಯ ಶಿರೋಳ ವಂದಿಸಿದರು.

# ನಿಯಮ ಉಲ್ಲಂಘಿಸಿದರೆ ಕಠಿಣ ಕ್ರಮ

▶▶ಮೊದಲನೇ ಪುಟದಿಂದ

ಅಂಗಡಿಗಳನ್ನು ಮುಚ್ಚಿಸಿ ಕ್ರಮ ವಹಿಸಲಾಯಿತು. ಪಾನ್-ಬೀಡಾ ಅಂಗಡಿ, ಹೋಟೆಲ್‌ಗಳಲ್ಲಿ ಅನಧಿಕೃತ ಧೂಮಪಾನ ಅಡ್ಡೆಗಳನ್ನು ಮಾಡಿಕೊಂಡು ಸಾರ್ವಜನಿಕರ ಜೀವದ ಜೊತೆ ಚೆಲ್ಲಾಟವಾಡುತ್ತಿದ್ದು, ಈ ರೀತಿಯ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವದರಿಂದ ಅವರು ಸೇವಿಸಿ ಬಿಟ್ಟ ಹೊಗೆಯಿಂದ ಅಮಾಯಕರು ಆ ಹೊಗೆ ಸೇವಿಸಿ ಪರೋಕ್ಷ ಧೂಮಪಾನಿಗಳಾಗಿ ತಂಬಾಕು ಸೇವನೆಯಿಂದಾಗುವ ಅಪಾಯಕಾರಿ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆ, ಪಾರ್ಶ್ವವಾಯು ಇತ್ಯಾದಿ ಮಾರಣಾಂತಿಕ ಕಾಯಿಲೆಗಳಿಗೆ ಬಲಿಯಾಗುತ್ತಾರೆ.

ಕಾಯ್ದೆ ಉಲ್ಲಂಘನೆಯಾದಲ್ಲಿ ದಂಡದ ಮೊತ್ತ ರೂ. 1000 ಆಗಿದ್ದು ಧೂಮಪಾನದ ಜೊತೆಗೆ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವದನ್ನು ನಿಷೇಧಿಸಲಾಗಿದೆ. ಸೆಕ್ಷನ್ 6ಎ ಪ್ರಕಾರ 21 ವರ್ಷದೊಳಗಿನವರಿಗೆ ತಂಬಾಕು ಉತ್ಪನ್ನ ನಿಷೇಧಿಸಲಾಗಿದ್ದು, ಈ ಸೆಕ್ಷನ್‌ನಲ್ಲಿ ರೂ. 1000ವರೆಗೆ ದಂಡ ಹೆಚ್ಚಿಸಲಾಗಿದೆ. ಎಲ್ಲಾ ಸಾರ್ವಜನಿಕ ಸ್ಥಳಗಳಲ್ಲಿ ಅಧಿಕೃತ ಸೆಕ್ಷನ್ 4 ಹಾಗೂ ಸೆಕ್ಷನ್ 6ಎ ನಾಮಫಲಕವನ್ನು ಕಡ್ಡಾಯವಾಗಿ ಸ್ಥಳದ ಮಾಲಿಕರು ಬಿತ್ತರಿಸಬೇಕು. ಶಾಲಾ-ಕಾಲೇಜುಗಳ ಸುತ್ತಲಿನ ತಂಬಾಕು ಮಾರಾಟಗಾರರು ಮಾರಾಟ ನಿಲ್ಲಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಕಾನೂನು ರೀತಿ ಕಠಿಣ ಕ್ರಮ ಕೈಗೊಳ್ಳಲಾಗುವದು ಎಂದು ಎಚ್ಚರಿಕೆ ನೀಡಿದರು.


# ಅ.ಭಾ.ವೀ ಮಹಾಸಭಾ ಚುನಾವಣೆ ಮುಂದೂಡಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಮಹಾಸಭಾ ರಾಜ್ಯದ ಹಲವು ಜಿಲ್ಲೆ, ತಾಲೂಕು ಘಟಕಗಳಲ್ಲಿ ತೆರವಾಗಿದ್ದ ಸ್ಥಾನಕ್ಕೆ ಚುನಾವಣೆ ಜರುಗಿಸಲು ಪ್ರಕಟಿಸಿದ್ದ ಚುನಾವಣಾ ಪ್ರಕ್ರಿಯೆಯನ್ನು ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿದ್ದ ಶಾಮನೂರ ಶಿವಶಂಕರಪ್ಪ ಅವರ ನಿಧನದಿಂದಾಗಿ ಮುಂದೂಡಿದೆ.

ಈ ಕುರಿತು ರಾಜ್ಯ ಮಹಾಸಭಾ ಪ್ರಕಟಣೆ ನೀಡಿದ್ದು, ನಿಗದಿತ ದಿನಾಂಕವನ್ನು ನಂತರ ಪ್ರಕಟಿಸಲಾಗುವದು ಎಂದು ಮಹಾಸಭಾ ಗದಗ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರೈತ ಸಂಘದಿಂದ ಅನಿರ್ದಿಷ್ಟಾವಧಿ ಸತ್ಯಾಗ್ರಹ



■ವಿಜಯಸಾಕ್ಷಿ ಸುದ್ದಿ, ರೋಣ

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕಾ ಘಟಕದ ವತಿಯಿಂದ ಗುರುವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ, ತಹಸೀಲ್ದಾರ ಕಚೇರಿ ಆವರಣದಲ್ಲಿ ಅನಿರ್ದಿಷ್ಟಾವಧಿ ಸತ್ಯಾಗ್ರಹ ನಡೆಸಿದರು.

ಪಟ್ಟಣದ ಎಪಿಎಂಸಿ ಆವರಣದಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆ ಪಟ್ಟಣದ ಜಕ್ಕಲಿ ರಸ್ತೆ, ಮುಲ್ಲಾನ ಭಾವಿ ವೃತ್ತ ಹಾಗೂ ಪೋತರಾಜನ ಕಟ್ಟೆಯ ಬಳಿ ಮಾನವ ಸರಪಳಿ ನಿರ್ಮಿಸಿ ರಾಜ್ಯ ಹಾಗೂ ಕೇಂದ್ರ ಸರಕಾರಗಳ ವಿರುದ್ಧ ಧಿಕ್ಕಾರ ಕೂಗುತ್ತಾ ರೈತರ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ರೈತ ಮುಖಂಡ ಸಂಗಪ್ಪ ಪವಾಡಶೆಟ್ಟರ ಮಾತನಾಡಿ, ಅತಿಯಾದ ಮಳೆಯಿಂದ ಮುಂಗಾರು ಬೆಳೆಗಳನ್ನು ಕಳೆದುಕೊಂಡಿರುವುದು ನಾಡಿಗೆ ತಿಳಿದಿರುವ ಸಂಗತಿ. ಮುಂಗಾರು ಬೆಳೆಗಳು ಸಂಪೂರ್ಣ ನಾಶವಾಗಿದ್ದು, ಇದರಿಂದ ರೈತರ ಸಂಕಷ್ಟ ಹೆಚ್ಚಾಗಿದೆ. ಸರಕಾರ ಪರಿಹಾರ ವಿತರಣೆಯಲ್ಲಿಯೂ ಸಹ ಲೋಪದೋಷಗಳನ್ನು ಮಾಡಿದೆ. ಎಲ್ಲ ರೈತರಿಗೂ ಸಮರ್ಪಕವಾಗಿ ಪರಿಹಾರ ಸಿಕ್ಕಿಲ್ಲ. ಕೂಡಲೇ ಸರಕಾರ ಲೋಪವನ್ನು ಸರಿಪಡಿಸಿ ಪರಿಹಾರ ವಿತರಿಸಬೇಕು ಎಂದು ಆಗ್ರಹಿಸಿದರು.

ಮೇಘರಾಜ ಭಾವಿ ಮಾತನಾಡಿ, ರೈತರು ಬೆಳೆದ ಬೆಳೆಗಳಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ. ಇದರಿಂದ ರೈತರ ಆರ್ಥಿಕ ಸ್ಥಿತಿ ಮತ್ತಷ್ಟು ಹದಗೆಟ್ಟಿದೆ. ಬೆಳೆದ ಬೆಳೆಗಳಿಗೆ ಸಮರ್ಪಕ ಬೆಲೆ ಸಿಗದಿದ್ದರೆ ರೈತರು ಮಾಡಿದ ಸಾಲವನ್ನು ತೀರಿಸುವುದು ಕಷ್ಟವಾಗಲಿದೆ. ಇದನ್ನು ರಾಜ್ಯ ಮತ್ತು ಕೇಂದ್ರ ಸರಕಾರಗಳು ಅರಿಯಬೇಕು. ಜೊತೆಗೆ ಬೆಂಬಲ ಬೆಲೆ ನಿಗದಿ ಮಾಡಬೇಕು. ಅಂದಾಗ ಮಾತ್ರ ರೈತರು ಕೃಷಿ ಮಾಡಲು ಸಾಧ್ಯ ಎಂದರು.

ಪ್ರತಿಭಟನೆಯಲ್ಲಿ ಮುತ್ತಣ್ಣ ಚೌಡರೆಡ್ಡಿ, ಸಂಗಪ್ಪ ದಂಡಿನ, ಧರ್ಮಣ್ಣ ಭೂಸಗೌಡ್ರ, ಅಶೋಕ ಹಿರೇಮಠ, ರುದ್ರಯ್ಯ ಸಾಲಿಮಠ, ಗಂಗಣ್ಣ ಕೊಟಗಿ, ರಾಮಣ್ಣ ಸೂಡಿ, ಬೂದಪ್ಪ ಕಂಬಳಿ, ಹನಮಂತ ಅಬ್ಬಿಗೇರಿ ಸೇರಿದಂತೆ ನೂರಾರು ರೈತರು ಪಾಲ್ಗೊಂಡಿದ್ದರು.

# ಕಪ್ಪು ಪಟ್ಟಿ ಧರಿಸಿ ಶಿಕ್ಷಕರ ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಕರಿಗೆ ಟಿಇಟಿ ಕಡ್ಡಾಯ ನಿಯಮ ಸಡಿಲಗೊಳಿಸಬೇಕು ಎಂಬ ಬೇಡಿಕೆಯೂ ಸೇರಿ ಇನ್ನಿತರ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ರಾಜ್ಯಾದ್ಯಂತ ಶಿಕ್ಷಕರು ಕಪ್ಪು ಪಟ್ಟಿ ಧರಿಸಿ ಕರ್ತವ್ಯ ನಿರ್ವಹಿಸುತ್ತಿದ್ದು, ಅದರಂತೆ ಲಕ್ಷ್ಮೇಶ್ವರ ತಾಲೂಕಿನಾದ್ಯಂತ ಶಿಕ್ಷಕರು ಗುರುವಾರ ಕಪ್ಪು ಪಟ್ಟಿ ಧರಿಸಿದ ಶಿಕ್ಷಕರು ಪಾಠ ಪ್ರವಚನಗಳನ್ನು ನಡೆಸಿದರು.

ಶಿಕ್ಷಕರಿಗೆ ಟಿಇಟಿ ಕಡ್ಡಾಯ ನಿಯಮ ಸಡಿಲಗೊಳಿಸಬೇಕು ಎಂಬ ಪ್ರಮುಖ ಬೇಡಿಕೆ ಸುಪ್ರೀಂ ಕೋರ್ಟ್ ಆದೇಶ ಪುನರ್ ಪರಿಶೀಲನೆ ಸಲ್ಲಿಸಿ ಕಾನೂನು ಹೋರಾಟ ಒಂದು ಕಡೆಯಾದರೆ, ಮತ್ತೊಂದು ಕಡೆ ಸರ್ಕಾರ ಹಾಲಿ ಕರ್ತವ್ಯ ನಿರತ ಶಿಕ್ಷಕರಿಗೆ ನ್ಯಾಯ ಒದಗಿಸಬೇಕೆಂಬುದು ಶಿಕ್ಷಕರ ಬೇಡಿಕೆಯಾಗಿದ್ದು, ಇದರ ಜೊತೆಗೆ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಬೇಕು, ಗುತ್ತಿಗೆ ಆಧಾರದಲ್ಲಿ ಶಿಕ್ಷಕರ ನೇಮಕಾತಿ ಕೈಬಿಟ್ಟು ಖಾಯಂ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಬೇಕು, ದೇಶಾದ್ಯಂತ ಎಲ್ಲಾ ಶಿಕ್ಷಕರಿಗೂ ಏಕರೂಪದ ವೇತನ ನೀಡಬೇಕು ಎಂಬ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಗುರುವಾರ ಲಕ್ಷ್ಮೇಶ್ವರ ತಾಲೂಕಿನಾದ್ಯಂತ ಶಿಕ್ಷಕರು ತರಗತಿಯಲ್ಲಿ ಕಪ್ಪು ಪಟ್ಟಿ ಧರಿಸಿ ಪಾಠ ಪ್ರವಚನ ಮಾಡಿ ಪ್ರತಿಭಟನೆ ನಡೆಸಿದರು.

# ನಿಧನ

## ಸುಮಂಗಲಾ ಅಂಗಡಿ



**ಗದಗ:** ನಗರದ ಹಾತಲಗೇರಿ ನಾಕಾ ನಿವಾಸಿ ಸುಮಂಗಲಾ ಬಸವಣ್ಣೆಪ್ಪ ಅಂಗಡಿ (74) ಬುಧವಾರ ನಿಧನರಾದರು.

ಮೃತರಿಗೆ ಮೂವರು ಪುತ್ರರು, ಪುತ್ರಿ, ಮೊಮ್ಮಕ್ಕಳು ಹಾಗೂ ಅಪಾರ ಬಂಧುಗಳು ಇದ್ದಾರೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಮಿತಿಯ ಪದಾಧಿಕಾರಿಗಳಿಗೆ ಸನ್ಮಾನ

# ತಾಲೂಕಿನ ಅಭಿವೃದ್ಧಿಯಲ್ಲಿ ಪತ್ರಕರ್ತರ ಪಾತ್ರ ಹಿರಿದು

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಶೋಷಿತರ, ದಮನಿತರ ಧ್ವನಿಯಾಗಿ ಪತ್ರಿಕೋದ್ಯಮ ಬೆಳೆದು ನಿಂತಿದೆ. ತಾಲೂಕಿನಲ್ಲಿ ಕೆಲ ಪತ್ರಕರ್ತರು ಕೇವಲ ಒಂದು ವರ್ಗದ ಕಡೆಗೆ ಹೆಚ್ಚು ಕೇಂದ್ರೀಕೃತವಾಗಿದ್ದಾರೆಂದು ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎನ್.ಜಿ. ಮನೋಹರ್ ಅಭಿಪ್ರಾಯಪಟ್ಟರು.

ಹರಪನಹಳ್ಳಿ ನಗರದ ಹೊರವಲಯದಲ್ಲಿರುವ ಸಮತಾ ರೆಸಾರ್ಟ್‌ನಲ್ಲಿ ನೂತನವಾಗಿ ಆಯ್ಕೆಗೊಂಡ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಮಿತಿಯ ಪದಾಧಿಕಾರಿಗಳಿಗೆ ತಾಲೂಕು ಸರ್ಕಾರಿ ನೌಕರರ ಸಂಘ ಹಾಗೂ ಸಾವಿತ್ರಿ ಬಾಯಿ ಫುಲೆ ಜಿಲ್ಲಾ ಸಮಿತಿ ವತಿಯಿಂದ ನಡೆದ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಯಾವುದೇ ಚಳುವಳಿ, ಆಂದೋಳನಗಳು ಯಶಸ್ವಿಯಾಗಬೇಕಾದರೆ ಸುದ್ದಿ ಮಾಧ್ಯಮದವರ ಪಾತ್ರ ಅಮೋಘವಾಗಿದೆ. ಇಂದು ಪತ್ರಿಕೋದ್ಯಮದಲ್ಲಿಯೇ ಆಂತರಿಕವಾದ ಸಮಸ್ಯೆಯು ರೆಕ್ಕೆಯಿಲ್ಲದ ಹಕ್ಕಿಯಂತಾಗಿದೆ. ಗ್ರಾಮೀಣ ಪ್ರದೇಶದಲ್ಲಿನ ಮೂಲಭೂತ ಸೌಲಭ್ಯಗಳ ಕೊರತೆಯನ್ನು ತೋರಿಸುವುದು ಮತ್ತು ತಾಲೂಕಿನ ಸರ್ವತೋಮುಖ ಅಭಿವೃದ್ಧಿಯಲ್ಲಿ ಪತ್ರಕರ್ತರ ಪಾತ್ರ ಹೆಚ್ಚಿರುತ್ತದೆ ಎನ್ನುವುದನ್ನು ಸಮಾಜ ಗಮನದಲ್ಲಿಟ್ಟುಕೊಳ್ಳಬೇಕು. ಸಮಾಜಮುಖಿ ಕೆಲಸಗಳು ಆಗಬೇಕು, ಅಂತಹ ಕಾರ್ಯ ನಿಮ್ಮಿಂದ ನಿರಂತರವಾಗಿ ಸಾಗುತ್ತಿರುವುದು ಸಂತಸದ ಸಂಗತಿ ಎಂದರು. ಸರ್ಕಾರಿ ನೌಕರರ ಸಂಘ ತಾಲೂಕು ಘಟಕದ ಪದಾಧಿಕಾರಿಗಳಾದ ಸಂಗಯ್ಯ, ಸಿ. ನಾಗರಾಜ್, ಕಮ್ಮತ್ತರ ಅಂಜಿನಪ್ಪ, ವೀರಪ್ಪ, ಪಿ. ಸುಬ್ಬಣ್ಣ, ಇಸ್ಮಾಯಿಲ್ ಗಿರಿರಾಜ್, ಜಮಾಲುದ್ದೀನ್, ಶೋಭಾಕುಮಾರಿ, ಹುಸೇನ್ ಬಾಷಾ ಸೇರಿದಂತೆ ಇತರರಿದ್ದರು. ಈ ವೇಳೆ ಪ್ರಗತಿಪರ ಚಿಂತಕ ಹಾಗೂ ಕಾಂಗ್ರೆಸ್ ಮುಖಂಡ ಕೋಡಿಹಳ್ಳಿ ಭೀಮಪ್ಪ, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎನ್.ಜಿ. ಮನೋಹರ್, ಸಾವಿತ್ರಿ ಬಾಯಿಪುಲೆ ಸಂಘದ ಜಿಲ್ಲಾಧ್ಯಕ್ಷೆ ಎಚ್.ಎಂ. ಲತಾ, ಪ್ರೌಢಶಾಲಾ



ಪ್ರಗತಿಪರ ಚಿಂತಕ ಹಾಗೂ ಕಾಂಗ್ರೆಸ್ ಮುಖಂಡ ಕೋಡಿಹಳ್ಳಿ ಭೀಮಪ್ಪ ಮಾತನಾಡಿ, ಸರ್ಕಾರವನ್ನು ಅಸ್ತಿತ್ವಕ್ಕೆ ತರುವ ಮತ್ತು ಬೀಳಿಸುವ ಶಕ್ತಿ ಮಾಧ್ಯಮಕ್ಕಿದೆ. ಸತ್ಯಕ್ಕೆ ದೂರವಾದ ಸುದ್ದಿಗಳನ್ನು ಪ್ರಸಾರ ಮಾಡದೆ, ವಾಸ್ತವಕ್ಕೆ ಸಮೀಪವಿರುವ ಸುದ್ದಿಗಳನ್ನು ಬಿತ್ತರಿಸಬೇಕು. ಪತ್ರಕರ್ತನಾದವನು ಸಾಮಾಜಿಕ ಜವಾಬ್ದಾರಿ ಹೊಂದಿರಬೇಕು ಎಂದರು.

ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಗುರುಮೂರ್ತಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಮಿತಿ ತಾಲೂಕಾಧ್ಯಕ್ಷ ಎ. ನಾಗೇಂದ್ರಪ್ಪ, ಪ್ರಧಾನ ಕಾರ್ಯದರ್ಶಿ ಬಿ.ವೈ. ದುರುಗೇಶ್, ಗೌರವಾಧ್ಯಕ್ಷ ಕೆ. ಉಚ್ಚೆಂಗೆಪ್ಪ, ಉಪಾಧ್ಯಕ್ಷ ಪಿ. ವೆಂಕಟೇಶ್, ಹಿರಿಯ ಪತ್ರಕರ್ತ ಡಿ. ವಿಶ್ವನಾಥ, ನಾಗಭೂಷಣ್, ವೆಂಕಟಪತಿ ರಾಜು, ರಾಮಚಂದ್ರ ನಾಗತಿಕಟ್ಟೆ, ಭೋವಿ ಮಂಜುನಾಥ, ಎ. ಬಸವರಾಜ, ಕೆ. ಬಸವರಾಜ, ಶಬ್ಬೀರ್, ಮೈಲಾರಿ, ಶಶಿ, ಪಿ. ಬಸವರಾಜ ಮುಂತಾದವರಿದ್ದರು.

**ಮಧ್ಯಾಹ್ನದ ಬಿಸಿಯೂಟದ ಜೊತೆ ಕೋಳಿಮೊಟ್ಟೆ ಯೋಜನೆ; ಶಾಲಾ ಮುಖ್ಯ ಶಿಕ್ಷಕರಿಗೆ ತಲೆನೋವು**

# ಪೇಚಿಗೆ ಸಿಲುಕಿಸಿದ 'ಒಂದು ಮೊಟ್ಟೆಯ ಕಥೆ!'



> ಮೊಟ್ಟೆಯ ಬೆಲೆ ದಿನೇ ದಿನೇ ಹೆಚ್ಚುತ್ತಿರುವುದರಿಂದ, ಪೂರಕ ಪೌಷ್ಟಿಕ ಮೊಟ್ಟೆಯ ಘಟಕದ ಬೆಲೆ ಹೆಚ್ಚಿಸಿ ಪರಿಷ್ಕರಿಸುವಂತೆ ಜಿಲ್ಲಾ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಸಂಘಟನೆಯ ಮೂಲಕವೂ ಮನವಿ ನೀಡಲಾಗಿದೆ.
>
> ಈ ಕುರಿತು ಜಿಲ್ಲಾ ಶಿಕ್ಷಣಾಧಿಕಾರಿಗಳು ಸರಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರಸ್ತಾವನೆ ಕಳುಹಿಸಿದ್ದಾರೆ. ಸರಕಾರ ಆದಷ್ಟು ಬೇಗ ಈ ಬಗ್ಗೆ ಕ್ರಮ ವಹಿಸುವ ಬಗ್ಗೆ ಆಶಾಭಾವನೆ ಇದೆ.
>
> **– ಎಸ್.ವಾಯ್. ವಿಭೂತಿ.**
> ಸಹಾಯಕ ನಿರ್ದೇಶಕರು,
> ಅಕ್ಷರ ದಾಸೋಹ-ಮುಂಡರಗಿ.



**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ತಾಲೂಕಿನ ಸರಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಮಕ್ಕಳ ಪೌಷ್ಟಿಕತೆ ಹೆಚ್ಚಿಸುವ ಉದ್ದೇಶದಿಂದ ಜಾರಿಗೊಳಿಸಿರುವ ಮಧ್ಯಾಹ್ನದ ಬಿಸಿಯೂಟದ ಜೊತೆ ಕೋಳಿಮೊಟ್ಟೆ ಯೋಜನೆ ಇದೀಗ ಮುಖ್ಯ ಶಿಕ್ಷಕರಿಗೆ ಹೊಸ ತಲೆನೋವಾಗಿ ಪರಿಣಮಿಸಿದೆ.

ಮೊಟ್ಟೆಯ ಬೆಲೆ ದಿನೇ ದಿನೇ ಏರಿಕೆಯಾಗುತ್ತಿರುವ ಕಾರಣದಿಂದ ಸರಕಾರ ನೀಡುವ ಅನುದಾನ ಸಾಲದೆ, ಶಿಕ್ಷಕರು ತಮ್ಮ ಕೈಯಿಂದ ಹಣ ಹಾಕಿ ಮೊಟ್ಟೆ ತರುವ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜ್ಯದಲ್ಲಿ ಅಪೌಷ್ಟಿಕತೆ ನಿವಾರಣೆ ಹಾಗೂ ಶಾಲಾ ಹಾಜರಾತಿ ಹೆಚ್ಚಿಸುವ ಉದ್ದೇಶದಿಂದ ಮಧ್ಯಾಹ್ನದ ಬಿಸಿಯೂಟ ಯೋಜನೆ ಯಶಸ್ವಿಯಾಗಿ ಜಾರಿಯಲ್ಲಿದೆ. ಈ ಯೋಜನೆಯ ಮೂಲಕ ಸರಕಾರ ನೀಡುವ ಅನುದಾನದಡಿ ಈ ಹಿಂದೆ ವಾರಕ್ಕೆ ಎರಡು ದಿನಗಳ ಕಾಲ ಮೊಟ್ಟೆ ನೀಡಲಾಗುತ್ತಿತ್ತು. 2024ರ ಸೆಪ್ಟೆಂಬರ್ ತಿಂಗಳಿನಿಂದ ವಿದ್ಯಾರ್ಥಿಗಳು ಉತ್ತಮ ಆರೋಗ್ಯ ಹೊಂದಬೇಕು ಎನ್ನುವ ದೃಷ್ಟಿಯಿಂದ ಅಜೀಂ ಪ್ರೇಮ್ ಫೌಂಡೇಷನ್ ಸಹಕಾರದೊಂದಿಗೆ ವಾರಕ್ಕೆ ಆರು ದಿನಗಳ ಕಾಲ ಮೊಟ್ಟೆ ವಿತರಣೆಗೆ ಸರಕಾರ ನಿರ್ಧಾರ ಕೈಗೊಂಡಿದೆ. ಮೊಟ್ಟೆ ತಿನ್ನದ ಮಕ್ಕಳಿಗೆ ಬಾಳೆಹಣ್ಣು ಸೇವಿಸುವ ಆಯ್ಕೆಯನ್ನೂ ನೀಡಲಾಗಿದೆ.

ಈ ಯೋಜನೆ ಬಹಳ ಪರಿಣಾಮಕಾರಿಯಾಗಿದ್ದು, ಮಕ್ಕಳಲ್ಲಿ ಪೌಷ್ಟಿಕತೆ ಹೆಚ್ಚಿಸುವ ಸರಕಾರದ ಉದ್ದೇಶ ಒಳ್ಳೆಯದೇ. ಆದರೆ ಅದನ್ನು ಜಾರಿ ಮಾಡಿರುವ ವಿಧಾನ ಶಿಕ್ಷಕರಲ್ಲಿ ಅಸಮಾಧಾನ ಉಂಟಾಗಲು ಕಾರಣವಾಗಿದೆ. ಸರಕಾರ ಬಾಳೆ ಹಣ್ಣು ಖರೀದಿಗೆ 6 ರೂ, ಮೊಟ್ಟೆಗೆ 6 ರೂನಂತೆ ನೀಡುತ್ತಿದ್ದು, ಅದರಲ್ಲಿ ಮೊಟ್ಟೆ ಖರೀದಿಯ ವೆಚ್ಚ 5 ರೂ, ಮೊಟ್ಟೆ ಬೇಯಿಸಲು ಗ್ಯಾಸ್ ವೆಚ್ಚ 50 ಪೈಸೆ, 20 ಪೈಸೆ ಅಂಗಡಿಯಿಂದ ಶಾಲೆಗೆ ಮೊಟ್ಟೆ ತರಲು ಸಾಗಾಣಿಕೆ ವೆಚ್ಚ ಹಾಗೂ ಮೊಟ್ಟೆ ಸುಲಿಯಲು 30 ಪೈಸೆ ಅಡಿಗೆಯವರಿಗೆ ನೀಡಲಾಗುತ್ತಿದೆ. ಒಟ್ಟು ಒಂದು ಮೊಟ್ಟೆಗೆ ಸರಕಾರ ನೀಡುವ ಮೊತ್ತ 6 ರೂ ಆಗಿದೆ.

ಆದರೆ, ಪ್ರಸ್ತುತ ಮೊಟ್ಟೆಯ ದರ ತೀವ್ರ ಏರಿಕೆಯಾಗಿದ್ದು, ಒಂದು ಮೊಟ್ಟೆಗೆ 8 ರೂ ಇದೆ. ಹೀಗಾಗಿ, ಸರಕಾರ ಕೊಡುವ ಅನುದಾನ ಸಾಕಾಗದೇ ಹೆಚ್ಚುವರಿಯಾಗಿ ಹಣವನ್ನು ಕೈಯಿಂದ ಭರಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಶಿಕ್ಷಕರು ಹೋಲ್‌ಸೇಲ್ ದರದಲ್ಲಿ ದೂರದ ಪಟ್ಟಣ ಪ್ರದೇಶದಿಂದ ಗ್ರಾಮೀಣ ಪ್ರದೇಶಕ್ಕೆ ತರುವಾಗ ಮಾರ್ಗ ಮಧ್ಯೆ ಒಡೆದು ಹೋದರೆ ಅದರ ವೆಚ್ಚವನ್ನು ಶಿಕ್ಷಕರೇ ಭರಿಸಬೇಕು.

ಮಕ್ಕಳಿಗೆ ಬೋಧನೆಯ ಜೊತೆಗೆ ಹೆಚ್ಚುವರಿಯಾಗಿ ಮೊಟ್ಟೆ ವಿತರಣೆಯ ಕಾಯಕವನ್ನೂ ಹೆಗಲ ಮೇಲೆ ಹಾಕಿಕೊಂಡಿರುವ ಶಿಕ್ಷಕರಿಗೆ ಬೆಲೆ ಏರಿಕೆಯಿಂದ ಶಾಲೆಗಳನ್ನು ನಿಭಾಯಿಸುವುದೇ ಸವಾಲಿನ ಕೆಲಸವಾಗಿದೆ. ಕೆಲವು ಶಿಕ್ಷಕರಂತೂ ಬಿಸಿಯೂಟದ ಜವಾಬ್ದಾರಿಯೇ ಬೇಡ ಎಂದು ಬೇರೆ ಶಿಕ್ಷಕರಿಗೆ ಹಸ್ತಾಂತರ ಮಾಡುತ್ತಿರುವ ಘಟನೆಗಳೂ ನಡೆಯುತ್ತಿವೆ. ಮೊಟ್ಟೆ ಬೆಲೆ ಏರಿಕೆ ಆಗಿರುವುದರಿಂದ ಕೆಲವು ಶಾಲೆಗಳಲ್ಲಿ ಮೊಟ್ಟೆ ಬದಲಿಗೆ ಬಾಳೆ ಹಣ್ಣು ನೀಡಲಾಗುತ್ತಿದೆ ಎಂಬ ಆರೋಪವೂ ಕೇಳಿ ಬರುತ್ತಿದೆ.

ಮುಂಡರಗಿ ತಾಲೂಕಿನಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಸೇರಿ ಒಟ್ಟು 125 ಸರಕಾರಿ ಶಾಲೆಗಳಿದ್ದು, ಪ್ರತಿದಿನ ಸುಮಾರು 19178 ವಿದ್ಯಾರ್ಥಿಗಳು ಮಧ್ಯಾಹ್ನದ ಬಿಸಿಯೂಟ ಯೋಜನೆಯ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ಸಣ್ಣ-ಪುಟ ಶಾಲೆಗಳನ್ನು ನಿಭಾಯಿಸಬಹುದು. ಆದರೆ 100ರಿಂದ 150ಕ್ಕೂ ಹೆಚ್ಚಿನ ವಿದ್ಯಾರ್ಥಿಗಳಿರುವ ಶಾಲೆಗಳನ್ನು ನಿಭಾಯಿಸುವುದು ಸವಾಲಿನ ಕೆಲಸವಾಗಿದೆ. ಅಲ್ಲದೇ ಎಸ್‌ಡಿಎಮ್‌ಸಿ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯರ ಕಿರುಕುಳ ದಿನೆ ದಿನೇ ಹೆಚ್ಚಾಗುತ್ತಿದೆ. ಸರ್ಕಾರ ಇದರಲ್ಲಿ ಬದಲಾವಣೆ ಮಾಡಬೇಕು. ಮೊಟ್ಟೆಗಾಗಿಯೇ ನಿತ್ಯ 250 ರೂಗಿಂತ ಹೆಚ್ಚಿನ ಹಣವನ್ನು ಕೈಯಿಂದ ಭರಿಸಬೇಕಿದೆ. ಅಕಸ್ಮಾತ್ ಮೊಟ್ಟೆ ವಿತರಣೆಯಲ್ಲಿ ಲೋಪದೋಷ ಕಂಡುಬಂದರೆ ಮೇಲಧಿಕಾರಿಗಳಿಂದ ನೋಟಿಸ್ ಬರುತ್ತದೆ ಎಂದು ತಮ್ಮ ಅಳಲು ತೋಡಿಕೊಳ್ಳುತ್ತಾರೆ ಹೆಸರು ಹೇಳಲಿಚ್ಛಿಸದ ಶಿಕ್ಷಕರೊಬ್ಬರು.

# ಮಹಾಯೋಗಿ ವೇಮನ ಜಯಂತಿ ಅರ್ಥಪೂರ್ಣವಾಗಿರಲಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಹಾಯೋಗಿ ವೇಮನರ ಜಯಂತಿಯನ್ನು ಜನವರಿ 19ರಂದು ಅರ್ಥಪೂರ್ಣವಾಗಿ ಆಚರಿಸಲು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಮಹಾಯೋಗಿ ವೇಮನರ ಜಯಂತಿ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಸಹ ವೇಮನರ ಜಯಂತಿ ಆಚರಣೆಗೆ ಕ್ರಮ ವಹಿಸಬೇಕು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆಯನ್ನು ಮುದ್ರಿಸಲು ಕ್ರಮ ವಹಿಸಬೇಕು. ಎಸ್.ಎಸ್.ಎಲ್.ಸಿ, ಪಿ.ಯು.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನಿಸುವ ಕಾರ್ಯಕ್ರಮ ಜರುಗಲಿದೆ. ವೇಮನರ ಕುರಿತು ಆಳವಾಗಿ ಅಧ್ಯಯನ ಮಾಡಿದವರನ್ನು ಉಪನ್ಯಾಸಕರನ್ನಾಗಿ ಆಹ್ವಾನಿಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಮಹಾಯೋಗಿ ವೇಮನರ ಜಯಂತಿಯನ್ನು ಜ. 19ರಂದು ಜಿಲ್ಲಾಡಳಿತ ಹಾಗೂ ಸಮುದಾಯದ ಸಹಯೋಗದೊಂದಿಗೆ ಆಚರಿಸಲಾಗುತ್ತಿದ್ದು, ಸಮುದಾಯದವರು ಹಾಗೂ ಇಲಾಖೆಯವರು ಸಮಾಲೋಚನೆ ನಡೆಸಿದ ನಂತರ ಕಾರ್ಯಕ್ರಮದ ಸ್ಥಳವನ್ನು ನಿಗದಿಪಡಿಸಲಾಗುವುದು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಸಮುದಾಯದ ಅಧ್ಯಕ್ಷರು, ಪದಾಧಿಕಾರಿಗಳು, ಹಿರಿಯರು, ಗಣ್ಯರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಡಿಜಿಟಲ್ ಇ-ಸ್ಟಾಂಪ್ ವ್ಯವಸ್ಥೆ ಜಾರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರದ 2025-26ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಡಿಜಿಟಲ್ ಇ-ಸ್ಟಾಂಪ್ ವ್ಯವಸ್ಥೆಯನ್ನು ರಾಜ್ಯದ ಎಲ್ಲ ಜಿಲ್ಲೆಗಳಿಗೂ ವಿಸ್ತರಿಸಲಾಗುವುದೆಂದು ಘೋಷಿಸಲಾಗಿದೆ. ಈ ಕಾರಣದಿಂದಾಗಿ ಡಿಜಿಟಲ್ ಇ-ಸ್ಟಾಂಪ್ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ವಿಸ್ತರಿಸಲು ನಿರ್ಧರಿಸಲಾಗಿದೆ.



ಡಿಜಿಟಲ್ ಇ-ಸ್ಟಾಂಪ್ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಲಿದೆ. ನೋಂದಣಿಯೇತರ ದಸ್ತಾವೇಜಿನಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ಡಿಜಿಟಲ್ ಇ-ಸ್ಟಾಂಪ್ ವಿಳಂಬವನ್ನು ತಡೆಗಟ್ಟುತ್ತದೆ. ಸ್ಥಳೀಯ ನಾಗರಿಕರು ಯಾವುದೇ ಮಧ್ಯವರ್ತಿಗಳ ನೆರವಿಲ್ಲದೆ ಸ್ವತಃ ಆನ್‌ಲೈನ್‌ನಲ್ಲಿ ಕರಡು ತಯಾರಿಸಿ ಇ-ಸ್ಟಾಂಪ್ ಸೃಜಿಸಿಕೊಳ್ಳಬಹುದು. ಈ ಸೇವೆ 24*7 ಲಭ್ಯ. ಸಂಪೂರ್ಣ ಪ್ರಕ್ರಿಯೆಯು ಡಿಜಿಟಲ್ ಆಗಿದ್ದು ಸುರಕ್ಷತೆ, ವೇಗದ ಎಲೆಕ್ಟ್ರಾನಿಕ್ ಪಾವತಿಗಳನ್ನು 24*7 ಮಾಡಬಹುದು. ಸ್ಟಾಂಪ್ ವಿಷಯವು ದಸ್ತಾವೇಜಿನ ಅವಿಭಾಜ್ಯವಾಗುತ್ತದೆ. ಇದು ದುರುಪಯೋಗವನ್ನು ತಡೆಯುತ್ತದೆ. ಆಧಾರ್ ಆಧಾರಿತ ಇ-ಸೈನ್ ಅಥವಾ ಡಿಎಸ್‌ಸಿ ಬಳಸಿ ದಸ್ತಾವೇಜುಗಳಿಗೆ ಡಿಜಿಟಲ್ ಸಹಿ ಮಾಡಬಹುದು. ಈ ವ್ಯವಸ್ಥೆ ಸುರಕ್ಷಿತ, ವಿಶ್ವಾಸಾರ್ಹ ಮತ್ತು ನಿರಂತರವಾಗಿ 24*7 ಲಭ್ಯವಿದೆ.

ಸಾರ್ವಜನಿಕರು ಡಿಜಿಟಲ್ ಇ-ಸ್ಟಾಂಪ್ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ನೋಂದಣಿಯೇತರ ದಸ್ತಾವೇಜುಗಳಿಗೆ ಉಪಯೋಗಿಸಲು ತಿಳಿಸಿದೆ.

https://kaveri.karnataka.gov.in ಈ ಲಿಂಕನ್ನು ಬಳಸಿ ಡಿಜಿಟಲ್ ಇ-ಸ್ಟಾಂಪ್‌ನ್ನು ಪಡೆದುಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೀರ್ಘಾವಧಿ ಸಿಎಂ ಆಗಿ ಚರಿತ್ರೆ ಬರೆದ ಸಿದ್ದರಾಮಯ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಾಮಾಜಿಕ ನ್ಯಾಯದ ಹರಿಕಾರ ಡಿ. ದೇವರಾಜ ಅರಸು ಸಮನಾಗಿ ಸಿಎಂ ಅಧಿಕಾರಾವಧಿಯನ್ನು ಪೂರೈಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೀರ್ಘಾವಧಿಯ ಸಿಎಂ ಎನ್ನುವ ದಾಖಲೆ ಬರೆದ ಹಿನ್ನೆಲೆಯಲ್ಲಿ ಅವರ ಅಭಿಮಾನಿಗಳು ಇಲ್ಲಿನ ತಿಮ್ಮಾಪೂರ ಗ್ರಾಮದಲ್ಲಿ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಪಟಾಕಿ ಸಿಡಿಸಿ ಪರಸ್ಪರ ಸಿಹಿ ಹಂಚಿ ಸಂಭ್ರಮ ಆಚರಿಸಿದರು. ಈ ಸಂದರ್ಭದಲ್ಲಿ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಮಾತನಾಡಿ, ರಾಜ್ಯ ರಾಜಕಾರಣದ ಇತಿಹಾಸದ ಪುಟಗಳಲ್ಲಿ ಸುದೀರ್ಘ ಕಾಲ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ ದಾಖಲೆ ಸಿದ್ದರಾಮಯ್ಯನವರದ್ದಾಗಿದೆ. ಮೈಸೂರಿನ ಸಿದ್ದರಾಮನಹುಂಡಿ ಗ್ರಾಮದ ಸಾಮಾನ್ಯ ರೈತ ಕುಟುಂಬದಿಂದ ಬಂದ ಸಿದ್ದರಾಮಯ್ಯ ವಿಧಾನಸೌಧದ ಶಕ್ತಿ ಪೀಠದಲ್ಲಿ ದೀರ್ಘಕಾಲ ಕುಳಿತು ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಅವರು ತಮ್ಮ ಅಧಿಕಾರಾವಧಿಯಲ್ಲಿ ಜನರಿಗೆ ನೀಡಿದ್ದ ಐದು ಭರವಸೆಗಳನ್ನು ಈಡೇರಿಸಿ ನುಡಿದಂತೆ ನಡೆದಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಾಳಪ್ಪ ಗಂಗರಾತ್ರಿ, ರಾಮಪ್ಪ ಹಚ್ಚಪ್ಪನವರ, ಶರಣಪ್ಪ ಜೋಗಿನ, ಮಲ್ಲಪ್ಪ ಇದ್ಲಿ, ಸಂಗಪ್ಪ ಮಳ್ಳಿ, ಚಿನ್ನಪ್ಪ ಬಿಸನಳ್ಳಿ, ವಿರೂಪಾಕ್ಷಪ್ಪ ಸೋಮಾಪೂರ, ಹನುಮಪ್ಪ ಜೋಗಿನ, ಭೀಮಪ್ಪ ಆಲೂರು, ಕಪ್ಪತ್ತಪ್ಪ ಸೊಂಪೂರ, ರಾಮಣ್ಣ ಗಾಣದ, ಮಾರುತಿ ಬಾಬರಿ, ಮುದುವಪ್ಪ ದೇವರವರ, ಅರ್ಚಕರಾದ ವೆಂಕಟೇಶ ಪೂಜಾರ, ಶಂಕ್ರಪ್ಪ ಪೂಜಾರ ಸೇರಿದಂತೆ ಅಭಿಮಾನಿಗಳು ಪಾಲ್ಗೊಂಡಿದ್ದರು.

**ಮಿಥುನ್ ಜಿ.ಪಾಟೀಲರ 48ನೇ ಜನ್ಮದಿನದಂದು ವಿಶೇಷ ಕಾರ್ಯಕ್ರಮ**

# ಎಂಜಿಪಿ ಯುವ ಬ್ರಿಗೇಡ್‌ನಿಂದ ಪ್ರೋ ಕಬಡ್ಡಿ ವೈಭವ

**■ವಿಜಯಸಾಕ್ಷಿ ಸುದ್ದಿ, ರೋಣ**

ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಜಿ.ಪಾಟೀಲ (ಮಿಥುನ್)ರವರ 48ನೇ ಜನ್ಮದಿನದ ನಿಮಿತ್ತ ಪಟ್ಟಣದ ಜಕ್ಕಲಿ ರಸ್ತೆಯಲ್ಲಿರುವ ಸೇಲ್ಸ್ ಸೊಸೈಟಿ ಆವರಣದಲ್ಲಿ ಜ.10ರಿಂದ 13ರವರೆಗೆ ಪ್ರೋ ಕಬಡ್ಡಿ ವೈಭವ ನಡೆಯಲಿದೆ ಎಂದು ತಾಲೂಕಾ ಯುವ ಕಾಂಗ್ರೆಸ್ ಅಧ್ಯಕ್ಷ ಮುತ್ತು ನವಲಗುಂದ ಹೇಳಿದರು.



ಅವರು ಗುರುವಾರ ಪಿಡಬ್ಲುಡಿ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಜ. 10ರಿಂದ 13ರವರೆಗೆ ನಡೆಯಲಿರುವ ಕಬಡ್ಡಿ ಪಂದ್ಯಗಳನ್ನು ವೀಕ್ಷಿಸಲು 4 ಸಾವಿರ ಜನರಿಗೆ ಗ್ಯಾಲರಿ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಪಂದ್ಯ ಆರಂಭಗೊಳ್ಳುವ ದಿನದಂದು ಬೆಂಗಳೂರು ಬುಲ್ಸ್ ತಂಡದ ಆಟಗಾರ ಗಣೇಶ ಹನ್ಮಂತಗೌಡ ಆಗಮಿಸಲಿದ್ದು, ಅಂದು ಬೆಳಿಗ್ಗೆ 10ಕ್ಕೆ ಪಟ್ಟಣದ ಸಿದ್ಧಾರೂಢ ಮಠದಿಂದ ಟ್ರೋಫಿಗಳ ಮೆರವಣಿಗೆ ನಡೆಯಲಿದೆ. ಸಂಜೆ 4ಕ್ಕೆ ಪಂದ್ಯಗಳ ಉದ್ಘಾಟನೆ ನಡೆಯಲಿದೆ ಎಂದರು.

ಯುವ ಮುಖಂಡ ಅಭಿಷೇಕ ನವಲಗುಂದ ಮಾತನಾಡಿ, ಕಬಡ್ಡಿ ಪಂದ್ಯಾವಳಿಗಳು ಅತ್ಯಂತ ವಿಶೇಷವಾಗಿದ್ದು, ಅಹ್ವಾನಿತ ನಾಲ್ಕು ಮಹಿಳಾ ತಂಡಗಳು ಪಾಲ್ಗೊಳ್ಳಲಿವೆ. ಅಲ್ಲದೆ ಜ. 12ರಂದು ಸಂಜೆ ಇದೇ ಸ್ಥಳದಲ್ಲಿ ಮಹಿಳಾ ವೇದಿಕೆಯನ್ನು ಸಿದ್ಧಪಡಿಸಲಾಗಿದ್ದು, ಜ. 9ರಂದು ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಉಚಿತ ಆರೋಗ್ಯ ತಪಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

> ಸೋಮು ನಾಗರಾಜ ಮಾತನಾಡಿ, ಜ. 13ರಂದು ಸಮಾರೋಪ ಸಮಾರಂಭ ಜರುಗಲಿದೆ. ಅಂದು ಬೆಂಗಳೂರು ಬುಲ್ಸ್ ತಂಡದ ಇನ್ನೋರ್ವ ಆಟಗಾರ ಸತ್ಯಪ್ಪ ಮಟ್ಟಿ ಹಾಗೂ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥಗೌಡ ಭಾಗವಹಿಸಲಿದ್ದಾರೆ. ಕೆಎಸ್‌ಆರ್‌ಟಿಸಿಯಲ್ಲಿ ಸೇವೆ ಸಲ್ಲಿಸಿ ಬಂಗಾರದ ಪದಕ ಪಡೆದಿರುವ ಸಿಬ್ಬಂದಿಗಳಿಗೆ, 108 ಅಂಬ್ಯುಲೆನ್ಸ್ ವಾಹನ ಚಾಲಕರಿಗೆ ಸೇರಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಿರುವ ಮಹನೀಯರುಗಳಿಗೆ ಸನ್ಮಾನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ತಾಲೂಕಿನ ಜನತೆ ಸೇರಿದಂತೆ ಮತಕ್ಷೇತ್ರದ ಜನರು ಕಬಡ್ಡಿ ವೈಭವದಲ್ಲಿ ಪಾಲ್ಗೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಕುಮಾರ ಗಡಗಿ, ಗೋಪಿ ರಾಯನಗೌಡ್ರ, ಬಸವರಾಜ ಹೊಸಳ್ಳಿ, ರಿಯಾಜ ಮುಲ್ಲಾ, ಅಬ್ಬು ಮುಲ್ಲಾ, ಸತೀಶ ಮುಂತಾದವರು ಉಪಸ್ಥಿತರಿದ್ದರು.

# ನಕಲಿ ಕಾರ್ಮಿಕ ಕಾರ್ಡ್‌ಗಳನ್ನು ತಿರಸ್ಕರಿಸಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣ ಸೇರಿದಂತೆ ಸುತ್ತಲಿನ ಗ್ರಾಮಗಳಲ್ಲಿ ನಕಲಿ ಕಾರ್ಮಿಕರ ಕಾರ್ಡ್‌ಗಳ ಹಾವಳಿ ಹೆಚ್ಚಾಗಿದ್ದು, ಅವುಗಳನ್ನು ಪತ್ತೆಹಚ್ಚಿ ರದ್ದು ಮಾಡಬೇಕು. ನಕಲಿ ಅರ್ಜಿಗಳನ್ನು ತಿರಸ್ಕರಿಸಬೇಕು ಎಂದು ಶ್ರೀ ಚಂದ್ರಮೌಳೇಶ್ವರ ಕಟ್ಟಡ ಮತ್ತು ಇತರೆ ನಿರ್ಮಾಣ ಸಂಘದ ಅಧ್ಯಕ್ಷ ಸಂತೋಷ ಮಣ್ಣೊಡ್ಡರ ಆಗ್ರಹಿಸಿದರು.



ಪಟ್ಟಣದ ಶ್ರೀ ಚಂದ್ರಮೌಳೇಶ್ವರ ಕಟ್ಟಡ ಮತ್ತು ಇತರೆ ನಿರ್ಮಾಣ ಸಂಘದ ವತಿಯಿಂದ ಗುರುವಾರ ತಾಲೂಕಾ ಕಾರ್ಮಿಕ ನಿರೀಕ್ಷಕ ಮಹ್ಮದ ಮುಸ್ತಾಫ್ ಅವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಪಟ್ಟಣ ಸೇರಿದಂತೆ ಹಲವು ಕಡೆಗಳಲ್ಲಿ ಕಾರ್ಮಿಕರಲ್ಲದವರು ಅರ್ಜಿ ಸಲ್ಲಿಸುತ್ತಿದ್ದು, ಅವುಗಳನ್ನು ತಿರಸ್ಕರಿಸಬೇಕು. ನೈಜ ಕಾರ್ಮಿಕರಿಗೆ ಇದರಿಂದ ಅನ್ಯಾಯವಾಗುತ್ತಿದೆ. ಈ ಬಗ್ಗೆ ಸರ್ಕಾರ ಸಾಕಷ್ಟು ಕ್ರಮಗಳನ್ನು ಕೈಗೊಂಡಿದ್ದರೂ ಸಹ ನಕಲಿ ಕಾರ್ಮಿಕರ ಕಾರ್ಡ್‌ಗಳು ವಿತರಣೆಯಾಗುತ್ತಿವೆ. ಕಾರ್ಮಿಕರ ಕಾರ್ಡ್‌ಗಳನ್ನು ಬೇಕಾಬಿಟ್ಟಿಯಾಗಿ ನೀಡಲು ಹೊಸ ಹೊಸ ಸಂಘಗಳು ಹುಟ್ಟಿದ್ದು, ಅವುಗಳ ಮೇಲೆ ಕಡಿವಾಣ ಹಾಕಬೇಕು. ಖಾಸಗಿ ಕಂಪ್ಯೂಟರ್ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಮಂಜುನಾಥ ಬಂಡಿವಡ್ಡರ, ದೊಡ್ಡಮರದಪ್ಪ ಕಟ್ಟಿಮನಿ, ಕುಮಾರ ಕಟ್ಟಿಮನಿ, ಸಹದೇವ ಬಿಸನಳ್ಳಿ, ಶಂಕ್ರಪ್ಪ ಮಣ್ಣೊಡ್ಡರ, ಪರಶುರಾಮ ಮಣ್ಣೊಡ್ಡರ, ಶೆಟ್ಟೆಪ್ಪ ವಡ್ಡರ, ಶೇಖಪ್ಪ ಮುಂದಿನಮನಿ, ಲಕ್ಷ್ಮಣ ಮಣ್ಣೊಡ್ಡರ, ಹುಚ್ಚೀರಪ್ಪ ಬಂಡಿವಡ್ಡರ ಸೇರಿದಂತೆ ಇತರರಿದ್ದರು.

ಕರ್ನಾಟಕ ಸರಕಾರ
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಗದಗ**
Email : pdj.gadag@gmail.com ಫೋನ ನಂ : 08372-222077
Website : https://gadag.dcourts.gov.in

ಕ್ರ.ಸಂ:ಇ-ಟೆಂಡರ್ ಅಧಿಸೂಚನೆ ಸಂಖ್ಯೆ: 1/2026 ದಿನಾಂಕ:06/01/2026

**ಕೆ.ಪಿ.ಪಿ.ಪಿ. ಪೋರ್ಟಲ್ ಟೆಂಡರ್ ಪ್ರಕಟಣೆ**

ಗದಗ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಸ್ವಚ್ಛತಾ ಕಾರ್ಯ ನಿರ್ವಹಿಸಲು ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಯನ್ನು ನೇಮಿಸಲು ಸರ್ವಿಸ್ ಕಾಂಟ್ರ್ಯಾಕ್ಟ್‌ಗಾಗಿ ಇ-ಟೆಂಡರ್‌ನ್ನು **KPP Portal** ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು, ನೋಂದಾಯಿತ ಅರ್ಹ ಸಂಸ್ಥೆಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಕೊನೆಯ **ದಿನಾಂಕ: 20.01.2026 ಸಾಯಂಕಾಲ 4.00 ಗಂಟೆ** ಇರುತ್ತದೆ. ಅರ್ಜಿ ಸಲ್ಲಿಸಲು **KPP Portal** ವೆಬ್‌ಸೈಟ್ ವಿಳಾಸ: **https://kppp.karnataka.gov.in** ಟೆಂಡರ್ ರೆಫರೆನ್ಸ್ ನಂ. **HCK/2025-26/SE0138.** ಹೆಚ್ಚಿನ ಮಾಹಿತಿಯನ್ನು ಕಾರ್ಯಾಲಯದ ಸಮಯದಲ್ಲಿ ಪಡೆಯಬಹುದಾಗಿದೆ.

ಸಹಿ/- ಮುಖ್ಯ ಆಡಳಿತಾಧಿಕಾರಿಗಳು
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,ಗದಗ.

ವಾ.ಸಾ.ಇ/ಗದಗ/511/
ದೇಶಪಾಂಡೆಪಬ್ಲಿಸಿಟಿ/2025-26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka